ಮಂಗಳವಾರ,30.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 116
Digital Varthe Kannada Daily
Volume 01 - Issue 116
Tuseday 30.12.2025
Price: 5/- Rs
2 Pages Bangalore

PRGI/RNI: KNKAN/25/A1348


# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಗಿಫ್ಟ್ ವಿವಾದವೇ ಜೀವಕ್ಕೆ ಕುತ್ತು: ಪತ್ನಿಯನ್ನು ಥಳಿಸಿ ಕೊಂದ ಪತಿ




**ಮುಂಬೈ:** ಮಹಾರಾಷ್ಟ್ರದ ಪಾಲ್ಘರ್‌ನಲ್ಲಿ ಮಹಿಳೆಯೊಬ್ಬಳು ಜಗಳದ ವೇಳೆ 'ಸ್ತ್ರಿಧನ್' (ವಿವಾಹದ ವೇಳೆ ಪೋಷಕರು ಅಥವಾ ಅತ್ತೆಯಿಂದ ಮಹಿಳೆ ಪಡೆಯುವ ಚರ ಅಥವಾ ಸ್ಥಿರ ಆಸ್ತಿಗಳು) ಹಿಂದಿರುಗಿಸುವಂತೆ ಒತ್ತಾಯಿಸಿದ್ದಕ್ಕೆ ಗಂಡ ಮತ್ತು ಅವನ ಸಹೋದರಿ ಸೇರಿ ಆಕೆಯನ್ನು ಹತ್ಯೆ ಮಾಡಿದ್ದಾರೆ.

ಹತ್ಯೆಯಾದ ಮಹಿಳೆಯನ್ನು ಕಲ್ಪನಾ ಸೋನಿ (35) ಎಂದು ಗುರುತಿಸಲಾಗಿದೆ. ಈಕೆ 2015 ರಲ್ಲಿ ಮಹೇಶ್ ಸೋನಿಯನ್ನು (38) ವಿವಾಹವಾಗಿದ್ದರು. ಬಳಿಕ ವಿರಾರ್‌ನಲ್ಲಿ ವಾಸಿಸುತ್ತಿದ್ದರು. ಆಗಾಗ ಮಹಿಳೆ ಮತ್ತು ಆಕೆಯ ಅತ್ತೆಯ ನಡುವೆ ಗಲಾಟೆ ಆಗುತ್ತಿದ್ದು, ಈ ವೇಳೆ ದೈಹಿಕ ಹಾಗೂ ಮಾನಸಿಕ ಕಿರುಕುಳ ನೀಡಲಾಗುತ್ತಿತ್ತು ಎಂದು ಆರೋಪಿಸಲಾಗಿದೆ ಡಿ.27 ರಂದು ಸಹ ಮಹಿಳೆ ಹಾಗೂ ಆಕೆಯ ಅತ್ತೆಯ ನಡುವೆ ಜಗಳ ನಡೆದಿತ್ತು. ಈ ವೇಳೆ ಮಹಿಳೆ ತಾನು ಮನೆ ಬಿಟ್ಟು ಹೋಗುವುದಾಗಿ ಹೇಳಿದ್ದಳು.

ಅಲ್ಲದೇ ತನಗೆ ಸೇರಬೇಕಾದ 'ಸ್ತ್ರಿಧನ್'ನ್ನು ವಾಪಸ್ ಕೊಡುವಂತೆ ಒತ್ತಾಯಿಸಿದ್ದಳು. ಆಕೆಯ ಬೇಡಿಕೆಯಿಂದ ಕೋಪಗೊಂಡ ಮಹೇಶ್ ಮತ್ತು ಆತನ ಸಹೋದರಿ ದೀಪಾಲಿ ಸೋನಿ, ಹರಿತವಾದ ಆಯುಧದಿಂದ ಕಲ್ಪನಾಳ ತಲೆಯ ಮೇಲೆ ಹಲ್ಲೆ ನಡೆಸಿದ್ದಾರೆ. ನೆರೆಹೊರೆಯವರು ಆಕೆಯನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು. ಅಲ್ಲಿ ವೈದ್ಯರು ಆಕೆ ಮೃತಪಟ್ಟಿದ್ದಾಗಿ ವೈದ್ಯರು ಘೋಷಿಸಿದ್ದಾರೆ. ಕಲ್ಪನಾ ಶೌಚಾಲಯದಲ್ಲಿ ಬಿದ್ದು ಸಾವನ್ನಪ್ಪಿದ್ದಾರೆ ಎಂದು ಆರೋಪಿ ಪೊಲೀಸರಿಗೆ ತಿಳಿಸಿದ್ದಾನೆ ಎಂದು ವರದಿಯಾಗಿದೆ. ಆದಾಗ್ಯೂ, ತೀವ್ರವಾದ ಹೊಡೆತಗಳಿಂದಾಗಿ ಸಾವು ಸಂಭವಿಸಿದೆ ಎಂದು ವೈದ್ಯರು ದೃಢಪಡಿಸಿದ್ದಾರೆ.

ದಂಪತಿಗೆ 7 ವರ್ಷದ ಮಗಳಿದ್ದು, ಘಟನೆಯ ಸಮಯದಲ್ಲಿ ಆಕೆ ಮನೆಯಲ್ಲಿ ಇರಲಿಲ್ಲ ಎಂದು ತಿಳಿದು ಬಂದಿದೆ. ಮಹೇಶ್ ಮತ್ತು ದೀಪಾಲಿ ವಿರುದ್ಧ ಕೊಲೆ ಪ್ರಕರಣ ದಾಖಲಾಗಿದ್ದು, ಅವರನ್ನು ಬಂಧಿಸಿ ಜ.2 ರವರೆಗೆ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ.

## ಓವರ್‌ಲೋಡ್ ಆಗಿದ್ದ ಟ್ರಕ್ ಪಲ್ಟಿ ಬೊಲೆರೋ ಅಪ್ಪಚ್ಚಿ, ಚಾಲಕ ಸಾವು



**ಲಕ್ನೋ:** ಡಿವೈಡರ್‌ಗೆ ಡಿಕ್ಕಿಯಾಗಿ ಓವರ್‌ಲೋಡ್ ಆಗಿದ್ದ ಟ್ರಕ್ ಪಲ್ಟಿಯಾದ ಪರಿಣಾಮ ಬೊಲೆರೋ ಅಪ್ಪಚ್ಚಿಯಾಗಿದ್ದು, ಚಾಲಕ ಸಾವನ್ನಪ್ಪಿರುವ ಘಟನೆ ಉತ್ತರ ಪ್ರದೇಶದ ರಾಂಪುರ ಜಿಲ್ಲೆಯ ನೈನಿತಾಲ್ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ. ಅಪಘಾತದಲ್ಲಿ ಬೊಲೆರೋ ಚಾಲಕ ಸಾವನ್ನಪ್ಪಿದ್ದಾರೆ. ಇನ್ನೂ ಬೊಲೆರೋ ವಾಹನದ ಮೇಲೆ ಉತ್ತರ ಪ್ರದೇಶ ಸರ್ಕಾರ ಎಂದು ಬರೆಯಲಾಗಿತ್ತು ಎಂದು ತಿಳಿದುಬಂದಿದೆ.

ಹೊಟ್ಟು ಸಾಗಿಸುತ್ತಿದ್ದ ಟ್ರಕ್ ಹೆದ್ದಾರಿಯಲ್ಲಿ ಹೊರಟಿದ್ದಾಗ ಡಿವೈಡರ್‌ಗೆ ಡಿಕ್ಕಿಯಾಗಿ ನಿಯಂತ್ರಣ ತಪ್ಪಿ, ಪಕ್ಕದಲ್ಲಿದ್ದ ಬೊಲೆರೋ ವಾಹನದ ಮೇಲೆ ಪಲ್ಟಿಯಾಗಿದೆ. ಪರಿಣಾಮ ಬೊಲೆರೋ ಅಪ್ಪಚ್ಚಿಯಾಗಿದ್ದು, ಚಾಲಕ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಅಪಘಾತದ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಮಾಹಿತಿ ತಿಳಿದ ಬಳಿಕ ರಾಂಪುರ ಪೊಲೀಸ್ ವರಿಷ್ಠಾಧಿಕಾರಿ ವಿದ್ಯಾಸಾಗರ್ ಮಿಶ್ರಾ ಮತ್ತು ಹತ್ತಿರದ ಪೊಲೀಸ್ ಠಾಣೆಯ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿದರು. ಜೆಸಿಬಿ ಮೂಲಕ ಬೊಲೆರೋ ಮೇಲಿದ್ದ ಟ್ರಕ್‌ನ್ನು ಬೇರ್ಪಡಿಸಿದರು. ಬಳಿಕ ಚಾಲಕನ ಶವವನ್ನು ಹೊರತೆಗೆದು ಮರಣೋತ್ತರ ಪರೀಕ್ಷೆಗಾಗಿ ಜಿಲ್ಲಾ ಆಸ್ಪತ್ರೆಗೆ ಕಳುಹಿಸಲಾಯಿತು.

ಸ್ಥಳ ಪರಿಶೀಲನೆ ಬಳಿಕ ರಾಂಪುರ ಪೊಲೀಸ್ ವರಿಷ್ಠಾಧಿಕಾರಿ ವಿದ್ಯಾಸಾಗರ್ ಮಿಶ್ರಾ ಮಾಹಿತಿ ನೀಡಿ, ಓರ್ವ ವ್ಯಕ್ತಿಯ ಮೃತದೇಹ ಮಾತ್ರ ಪತ್ತೆಯಾಗಿದ್ದು, ಟ್ರಕ್ ಹಾಗೂ ಹೊಟ್ಟಿನ ಕೆಳಗೆ ಯಾರು ಸಿಲುಕಿಲ್ಲ. ಬೊಲೆರೋ ಮೇಲೆ ಉತ್ತರ ಪ್ರದೇಶ ಸರ್ಕಾರ ಎಂದು ಬರೆದಿರುವುದರಿಂದ ಹೆಚ್ಚಿನ ಪರಿಶೀಲನೆ ನಡೆಸಲಾಗುತ್ತಿದೆ. ಸ್ಥಳದಲ್ಲಿ ಮೊಬೈಲ್ ಪತ್ತೆಯಾಗಿದ್ದು, ಅದರ ಸಂಖ್ಯೆಯನ್ನು ಆಧರಿಸಿ ಮೃತ ಚಾಲಕನ ಕುಟುಂಬವನ್ನು ಸಂಪರ್ಕಿಸಲು ಅಧಿಕಾರಿಗಳು ಪ್ರಯತ್ನಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ

## 99 ಲಕ್ಷ ರೂ. ಸಾಲ ಹಿಂತಿರುಗಿಸದ ಆರೋಪ ಬಿಜೆಪಿ ಶಾಸಕ ಶರಣು ಸಲಗರ್ ವಿರುದ್ಧ FIR



**ಬೀದರ್**: 99 ಲಕ್ಷ ರೂ. ಸಾಲ ಹಿಂತಿರುಗಿಸದ ಆರೋಪದ ಮೇರೆಗೆ ಬಸವಕಲ್ಯಾಣ ಕ್ಷೇತ್ರದ ಬಿಜೆಪಿ ಶಾಸಕ ಶರಣು ಸಲಗರ್ ವಿರುದ್ಧ ಪ್ರಕರಣ ದಾಖಲಾಗಿದೆ. ಬಸವಕಲ್ಯಾಣ ನಗರ ಠಾಣೆಯಲ್ಲಿ ಉದ್ಯಮಿ ಸಂಜು ಸುಗುರೆ ಎಂಬವರು ದೂರು ನೀಡಿದ್ದಾರೆ. 2023ರ ಚುನಾವಣೆ ಸಂದರ್ಭದಲ್ಲಿ ಉದ್ಯಮಿ ಸಂಜು ಸುಗುರೆಯಿಂದ ಶಾಸಕ ಸಲಗರ್ ಚುನಾವಣೆ ವೆಚ್ಚಕ್ಕೆಂದು 99 ಲಕ್ಷ ರೂ. ಸಾಲ ಪಡೆದಿದ್ದಾರೆಂದು ದೂರಿನಲ್ಲಿ ಉಲ್ಲೇಖ ಮಾಡಲಾಗಿದೆ.

ಶ್ಯೂರಿಟಿಗಾಗಿ ಖಾಲಿ ಚೆಕ್ ಹಾಗೂ ಲೆಟರ್ ಹೆಡ್ ಮೇಲೆ ಸೈನ್ ಮಾಡಿ ಶಾಸಕರು ಚೆಕ್ ನೀಡಿದ್ದು, ಎಷ್ಟೇ ಬಾರಿ ಹಣ ಕೇಳಿದರೂ ಶಾಸಕರು ಸಾಲ ಮರುಪಾವತಿಸಿಲ್ಲ. ಬಳಿಕ ಸೆ.14ರಂದು ರಂದು ಹಿರಿಯರ ಸಮ್ಮುಖದಲ್ಲಿ ಹಣ ನೀಡುವುದಾಗಿ ಒಪ್ಪಿ ಸಲಗರ್ ಚೆಕ್ ನೀಡಿದ್ದು, ಸೆ.16ರಂದು ಉದ್ಯಮಿ ಸಂಜು ಸುಗುರೆ ಹೆಂಡತಿ ಹಾಗೂ ಮಗ ಶಾಸಕರ ಮನೆಗೆ ತೆರಳಿದರು.

ಶರಣು ಸಲಗರ್ ನೀಡಿದ ಚೆಕ್ ಬ್ಯಾಂಕಿಗೆ ಹಾಕಲು ಖಾತ್ರಿಪಡಿಸಲು ಹೋದ ವೇಳೆ ಶಾಸಕರ ಮನೆಯಲ್ಲಿ ಗಲಾಟೆಯಾಗಿದ್ದು, ಚೆಕ್ ಬ್ಯಾಂಕಿಗೆ ಹಾಕುವುದಾಗಿ ಹೇಳಿದ್ದಕ್ಕಾಗಿ ಉದ್ಯಮಿ ಹೆಂಡತಿ ಹಾಗೂ ಮಗನಿಗೆ ಶಾಸಕ ಶರಣು ಸಲಗರ್ ಧಮ್ಕಿ ಹಾಕಿದ್ದಾರೆ ಎನ್ನಾಲಾಗಿದೆ. ಹಣ ವಾಪಸ್ ಕೊಡಿ ಎಂದು ಮನೆಗೆ ಹೋದರೆ ಅವಾಚ್ಯ ಶಬ್ದಗಳಿಂದ ಬೈದು ಧಮ್ಕಿ ಹಾಕಿದ್ದಾಗಿ ದೂರಿನಲ್ಲಿ ಉಲ್ಲೇಖ ಮಾಡಿದ್ದು, ಸೆ.19ರಂದು ಶರಣು ಸಲಗರ್ ನೀಡಿದ ಚೆಕ್ ಬ್ಯಾಂಕಿಗೆ ಹಾಕಿದ್ರೆ ವಾಪಸ್ ಬಂದಿದೆ.

ಕರ್ನಾಟಕ ಬ್ಯಾಂಕ್‌ನಲ್ಲಿದ್ದ ಶಾಸಕರ ಖಾತೆ ಮುಚ್ಚಲ್ಪಟ್ಟಿದೆ ಎಂದು ಮಾಹಿತಿ ನೀಡಿದ್ದು, ಬಳಿಕ ಶಾಸಕರ ವಿರುದ್ಧ ಬೆಂಗಳೂರಿನ ಎಸಿಜೆಎಂ ಕೋರ್ಟ್‌ನಲ್ಲಿ ಉದ್ಯಮಿ ಸಂಜು ಸುಗುರೆ ದಾವೆ ಹೂಡಿದ್ದರು. ಕೋರ್ಟ್ ಸೂಚನೆ ಮೇರೆಗೆ ಬಸವಕಲ್ಯಾಣ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಶಾಸಕರ ವಿರುದ್ಧ ದೂರು ದಾಖಲಿಸಿಕೊಂಡು ಪೊಲೀಸರು ತನಿಖೆ ಕೈಗೆತ್ತಿಕೊಂಡಿದ್ದಾರೆ

## ಸಮಾಜದಿಂದ ಎಲ್ಲವನ್ನು ಪಡೆದವರು ಮರಳಿ ಹಿತಿರುಗಿಸುವ ಗುಣ ಬೆಳೆಸಿಕೊಳ್ಳುವಂತೆ ಅನಂತ ಕುಮಾರಿ ಕರೆ




**ದೇವನಹಳ್ಳಿ:**- ಪ್ರತಿಯೊಬ್ಬರೂ ತಮ್ಮ ಸಾಮರ್ಥ್ಯಕ್ಕೆ ತಕ್ಕಂತೆ ಸಮಾಜಕ್ಕೆ ಕೊಡುಗೆ ನೀಡುವುದರಿಂದ ದೇಶದ ಅಭಿವೃದ್ಧಿಗೆ ಸಹಕರಿಯಾಗಲಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷೆ ಅನಂತಕುಮಾರಿ ಚಿನ್ನಪ್ಪ ಹೇಳಿದರು.

ದೇವನಹಳ್ಳಿ ತಾಲ್ಲೂಕು ಕೊಯಿರಾ ರಸ್ತೆ ಮನ್ವಂತರಿ ಕನ್ವರ್ಷನ್ ಹಾಲ್ ನಲ್ಲಿ ಜೇಸಿಐ ಚಪ್ಪರಕಲ್ಲು ಚಂದನ ನೂತನ ಪದಾಧಿಕಾರಿಗಳ ಪದವಿ ಸ್ವೀಕಾರ ಸಮಾರಂಭದಲ್ಲಿ ಸಸಿಗೆ ನೀರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಮಯ ಮತ್ತು ಮನಸ್ಸಿನ ಸಮರ್ಪಣೆಯಿಂದ ಎಂತಹ ಉನ್ನತ ಸ್ಥಾನಕ್ಕೆ ಬೆಳೆಯಲು ಪ್ರತ್ಯಕ್ಷ ಉಧಾಹರಣೆ ಎಂದರೆ ತಪ್ಪಾಗಲಾರದು. ಜಿಲ್ಲಾ ಪಂಚಾಯಿತಿ ಅಧಿಕಾರದ ಅವಧಿಯಲ್ಲಿ ಸ್ವಚ್ಚತೆ ಹಾಗೂ ಪರಿಸರ ಸಂರಕ್ಷಣೆಗೆ ಬಹಳಷ್ಟು ಒತ್ತು ನೀಡಿದ್ದರಿಂದ ಜೆಸಿಐ ಸಂಸ್ಥೆ ನಮ್ಮನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿದೆ. ಜೆಸಿಐ ಶಿಕ್ಷಣ ಮನರಂಜನೆ ಆರೋಗ್ಯ ಕ್ರೀಡೆ ಸೇರಿದಂತೆ 10 ಹಲವು ಸಾಮಾಜಿಕ ಚಟುವಟಿಕೆಗಳಿಗೆ ಕೈಲಾದ ಆರ್ಥಿಕ ಸಹಾಯವನ್ನು ಮಾಡುತ್ತಾ ಹಲವು ರೀತಿಯ ಹೆಗ್ಗಳಿಕೆಗೆ ಸಾಕ್ಷಿಯಾಗಿದೆ ಇಂತಹ ಸಂಸ್ಥೆಗಳಿಂದ ಬಡವರು ದೀನ ದಲಿತರು ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಅನುಕೂಲ ವಾಗಿದೆ. ಜೆಸಿಐನಲ್ಲಿ ಮೊಟ್ಟ ಮೊದಲ ಬಾರಿಗೆ ಒಬ್ಬ ಮಹಿಳೆ ಅಧ್ಯಕ್ಷರಾಗಿ ಆಯ್ಕೆ ಮಾಡಿರೊದ ಬಹಳ ಸಂತಸವಾಗಿದೆ ತಮ್ಮ ಸಾಮಾಜಿಕ ಸೇವಾ ಕಳಕಳಿ ಉಳಿದ ಮಹಿಳೆಯರಿಗೆ ಮಾದರಿ ಯಾಗಲೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಜೆಸಿಐ ಜಗದೀಶ್ ಅವರು ಮಾತನಾಡಿ, ಜೆಸಿಐ ಸಂಸ್ಥೆ ಎಲ್ಲಾ ವರ್ಗದ ಸಾಮಾಜಿಕ ಚಟುವ ಟಿಕೆಯಲ್ಲಿ ತೊಡಗಿಸಿಕೊಳ್ಳು ವುದರ ಜೊತೆಗೆ ವ್ಯಕ್ತಿ ವಿಕಸನ ಬೆಳವಣಿಗೆ ಹೆಚ್ಚಿಸಿಕೊ ಳ್ಳಲು ನಾನು ಈ ಹಿಂದೆ ಜೆಸಿಐ ಸಂಸ್ಥೆಯನ್ನು ಆಯ್ಕೆ ಮಾಡಿಕೊಂಡಿದ್ದೇವೆ ಸಮಾಜ ದಲ್ಲಿ ಕಂಡು ಕೇಳರಿಯ ದಂತ ಹಲವಾರು ವಿಷಯ ಗಳನ್ನು ಈ ಸಂಸ್ಥೆಯಿಂದ ಅಧಿಕಾರದ ಅವಧಿಯಲ್ಲಿ ಅನುಭವಿ ಸಿದ್ದೇನೆ. ಯುವ ಪೀಳಿಗೆ ಹಂತ ಹಂತವಾಗಿ ಬೆಳೆಯಲು ಜೆಸಿಐ ಸಂಸ್ಥೆ ಉತ್ತಮ ತರಬೇತಿ ಹಾಗೂ ಜಾಗೃತಿ ಮೂಡಿಸಲು ಸಹಕಾರಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪುರಸಭೆ ಉಪಾಧ್ಯಕ್ಷ ಗುಟ್ಟಹಳ್ಳಿ ರವೀಂದ್ರ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್ ಎಂ ರವಿಕುಮಾರ್, ದೇವನಹಳ್ಳಿ ಜೆಸಿಐ ಅಧ್ಯಕ್ಷ ಆನಂದ್, ಮಾಜಿ ಅಧ್ಯಕ್ಷ ವೇಣುಗೋಪಾಲ್, ಜೆಸಿಐ ವಲಯ ಅಧ್ಯಕ್ಷ ಪ್ರಜ್ವಲ್ ಜೈನ್, ಚಪ್ಪರಕಲ್ಲು ಚಂದನ ಮಾಜಿ ಅಧ್ಯಕ್ಷ ನರಗನಹಳ್ಳಿ ಶ್ರೀನಿವಾಸ್, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೃಷ್ಣಪ್ಪ, ತಾಲೂಕು ಅಧ್ಯಕ್ಷ ನಂಜೇಗೌಡ, ಸಮಾಜ ಸೇವಕ ಶಿವಾಜಿ ಗೌಡ, ಮುಖಂಡರಾದ ಅರುವನಹಳ್ಳಿ ವೆಂಕಟೇ ಗೌಡ, ಪ್ರಸನ್ನಹಳ್ಳಿವಿಜಯಕುಮಾರ್, ರಾಜಾರಾಮ್, ಕುರುಬರ ಕುಂಟೆ ಸುಧಾಕರ್, ರವಿ ಕೆಂಪೇ ಗೌಡ, ಇನ್ನೂ ಅನೇಕರು ಹಾಜರಿದ್ದರು.

## ಮುಖ್ಯ ರಸ್ತೆಯ ಡಾಂಬರೀಕರಣ ಅಧಿಕಾರಿಗಳ ವಿರುದ್ಧ ಅಸಮಾಧಾನ: ಪತ್ರಕರ್ತ ಲೋಕೇಶ್.ವಿ




ಪಟ್ಟಣದ ಮೈಸೂರು-ಚನ್ನರಾಯಪಟ್ಟಣದ ಪ್ರಮುಖ ರಸ್ತೆ ಉತ್ತಮವಾಗಿದ್ದು ಲೋಕೋಪಯೋಗಿ ಇಲಾಖೆಯು ಅದೇ ರಸ್ತೆಯ ಮೇಲೆ ಡಾಂಬರಿಕರಣ ಮಾಡಿರುವುದು ಸಾರ್ವಜನಿಕರಿಗೆ ಬೇಸರದ ವಿಷಯ, ಕೃಷ್ಣರಾಜಪೇಟೆ ತಾಲೋಕಿನ ಹಳ್ಳಿಗಳು ಹಾಗೂ ಪಟ್ಟಣದ ಪ್ರತಿಯೊಂದು ವಾರ್ಡ್ ಗಳ ರಸ್ತೆಗಳು ಸಹ ಸಾರ್ವಜನಿಕರ ಪ್ರಯಾಣಕ್ಕೆ ಯೋಗ್ಯವಾಗದೇ ಹದಗೆಟ್ಟು ಗುಂಡಿ ಬಿದ್ದಿರುವ ರಸ್ತೆಗಳಿಗೆ ಡಾಂಬರೀಕರಣ ಮಾಡುವ ಮನಸ್ಸು ಮಾಡದೇ ಚೆನ್ನಾಗಿ ಇರುವಂತಹ ರಸ್ತೆಗಳಿಗೆ ಡಾಂಬರು ಹಾಕಿರುವುದನ್ನು ಖಂಡಿಸಿ ಪತ್ರಕರ್ತ ಲೋಕೇಶ್.ವಿ ರವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ,

## ಹೊಸಹೊಳಲು ಗ್ರಾಮದ ಡೊಮೆಸ್ಟಿಕ್ ಕ್ರಿಕೆಟರ್ಸ್ ಮತ್ತು ಮುತ್ತು ಕಪ್ ಸೀಸನ್-2



ಕ್ರೀಡೆಗಳು ಕೇವಲ ಮನರಂಜನೆ ಮತ್ತು ದೈಹಿಕ ವ್ಯಾಯಾಮವಲ್ಲ; ಅವು ಆರೋಗ್ಯಕರ ದೇಹ ಮತ್ತು ಪ್ರಶಾಂತ ಮನಸ್ಸನ್ನು ನಿರ್ಮಿಸುವ ಶಕ್ತಿಯುತ ಸಾಧನಗಳಾಗಿವೆ ಹಾಗಾಗಿ ಯುವಕರು ದುಶ್ಚಟಗಳಿಂದ ದೂರವಿದ್ದು, ಕ್ರೀಡೆಗಳ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಸಮಾಜ ಸೇವಕರು ಹಾಗೂ ಉದ್ಯಮಿ ಹೊಸಹೊಳಲು ನಂಜುಂಡಸ್ವಾಮಿ ಅವರು ಯುವ ಸಮುದಾಯಕ್ಕೆ ನೀಡಿದರು.

ಅವರು ತಾಲ್ಲೂಕಿನ ಹೊಸಹೊಳಲು ಗ್ರಾಮದ ಡೊಮೆಸ್ಟಿಕ್ ಕ್ರಿಕೆಟರ್ ಮತ್ತು ಮುತ್ತು ಕಪ್ ಸೀಸನ್-2 ವತಿಯಿಂದ ಹೊಸಹೊಳಲು ಗ್ರಾಮದ ಅಕ್ಕಿಹೆಬ್ಬಾಳು ರಸ್ತೆಯ ಮೈದಾನದಲ್ಲಿ ಆಯೋಜಿಸಿದ್ದ ಕ್ರಿಕೆಟ್ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆಗಳು ಮನುಷ್ಯನ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಅತ್ಯವಶ್ಯಕವಾಗಿವೆ. ನಮ್ಮನ್ನು ಸದೃಢವಾಗಿ, ಕ್ರಿಯಾಶೀಲವಾಗಿರಿಸುತ್ತವೆ. ಕ್ರೀಡೆಗಳು ಒತ್ತಡ, ಖಿನ್ನತೆ ಮತ್ತು ಆತಂಕವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತವೆ, ಮೆದುಳಿನ ಕಾರ್ಯ ನಿರ್ವಹಣೆಯನ್ನು ಸುಧಾರಿಸುತ್ತವೆ. ಶಿಸ್ತು, ನಾಯಕತ್ವ, ತಂಡದ ಕೆಲಸದಂತಹ ಜೀವನ ಕೌಶಲ್ಯಗಳನ್ನು ಕಲಿಸುತ್ತವೆ. ಒತ್ತಡ ನಿವಾರಣೆ ಮಾಡಿ, ಆತ್ಮವಿಶ್ವಾಸ ಹೆಚ್ಚಿಸುತ್ತವೆ ಮತ್ತು ಆರೋಗ್ಯಕರ ಜೀವನಶೈಲಿಗೆ ಅಡಿಪಾಯ ಹಾಕುತ್ತವೆ. ದೈಹಿಕ ವಾಗಿ ಸಕ್ರಿಯವಾಗಿರಿಸುವುದರಿಂದ ಸ್ಥೂಲಕಾಯತೆ ಮತ್ತು ಇತರ ಆರೋಗ್ಯ ಸಮಸ್ಯೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ ಆದ್ದರಿಂದ ಯುವಕರು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು. ಸರ್ಕಾರವು ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಕಡ್ಡಾಯವಾಗಿ ದೈಹಿಕ ಶಿಕ್ಷಕರನ್ನು ನೇಮಕ ಮಾಡಬೇಕು ಈ ಮೂಲಕ ವಿದ್ಯಾರ್ಥಿಗಳ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಅವಕಾಶ ಕಲ್ಪಿಸಬೇಕು. ಯುವಕರು ಮೊಬೈಲ್ ಗೀಳಿನಿಂದ ಹೊರಬಂದು ಕ್ರೀಡೆಗಳಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಕ್ರೀಡೆಯ ಮಹತ್ವವನ್ನು ತಿಳಿಸಿದರು.

ಈ ನಿಟ್ಟಿನಲ್ಲಿ ನಮ್ಮ ಹೊಸಹೊಳಲು ಗ್ರಾಮದ ಡೊಮೆಸ್ಟಿಕ್ ಕ್ರಿಕೆರ್ಸ್ ಯುವಕರ ಬಳಗದವರು ಎರಡು ದಿನಗಳ ಕ್ರಿಕೆಟ್ ಪಂದ್ಯಾವಳಿಗಳನ್ನು ಹಮ್ಮಿಕೊಂಡು ಯುವಕರಲ್ಲಿ ಒಗ್ಗಟ್ಟು ಮೂಡಿಸುತ್ತಿರುವುದು ಶ್ಲಾಘನೀಯ. ಅಲ್ಲದೆ ಯುವಕರನ್ನು ದುಶ್ಚಟದಿಂದ ದೂರ ಮಾಡಿ ಒಳ್ಳೆಯ ಗುಣಗಳನ್ನು ಬೆಳೆಸಿಕೊಳ್ಳಲು ಸಹಕಾರ ನೀಡುತ್ತಿರುವುದು ಅತ್ಯಂತ ಶ್ಲಾಘನೀಯವಾದ ಕೆಲಸವಾಗಿದೆ ಎಂದು ಉದ್ಯಮಿ ನಂಜುಂಡಸ್ವಾಮಿ ಮೆಚ್ಚುಗೆ ವ್ಯಕ್ತಪಡಿಸಿದರು.

ಪಂದ್ಯಾವಳಿಯಲ್ಲಿ 6 ತಂಡಗಳು ಭಾಗವಹಿಸಿದ್ದು ಪ್ರಥಮ ಸ್ಥಾನ ಶಿವಪುತ್ರ ಬಾಯ್ಸ್ ದ್ವಿತೀಯ ಸ್ಥಾನ ASS ಬಾಯ್ಸ್ ತೃತೀಯ ಸ್ಥಾನ MSD ಬಾಯ್ಸ್ ತಂಡದ ನಾಯಕರುಗಳಾದ ಹರೀಶ್. ಮನೋಜ್.ಕೃಷ್ಣ ರವರು ಟ್ರೋಫಿಯನ್ನು ಸ್ವೀಕರಿಸಿ ಸಂಭ್ರಮಿಸಿದರು

ತೀರ್ಪುಗಾರರಾಗಿ ಮಂಜು ಮತ್ತು ಮಹೇಶ್ ಭಾಗವಹಿಸಿದ್ದಾರೆ. ಅತ್ಯುತ್ತಮ ಬೌಲಿಂಗ್ ಪ್ರದರ್ಶನ ಮಾಡಿದ ಶ್ರೀಕಂಠ ಹಾಗೂ ಅತ್ಯುತ್ತಮ ಬ್ಯಾಟಿಂಗ್ ಮಾಡಿದ ಕೃಷ್ಣ ರವರಿಗೆ ಪ್ರಶಸ್ತಿ ನೀಡಲಾಯಿತು,

ಮುಖ್ಯ ಅತಿಥಿಗಳಾಗಿ ಉದ್ಯಮಿಗಳು ಮತ್ತು ಸಮಾಜ ಸೇವಕರಾದ ನಂಜುಂಡಸ್ವಾಮಿ, ಹೊಸಹೊಳಲು, ರಾಘು, ಪೋಲೀಸ್ ರವಿ, ಪತ್ರಕರ್ತರಾದ ಸಾಯಿಕುಮಾರ್, ಲೋಕೇಶ್.ವಿ, ರಾಜು.ಜಿ.ಪಿ , ಹೊಸಹೊಳಲು ಮುಖಂಡ ನವೀನ್, ಆಯೋಜಕರಾದ ಪತ್ರಕರ್ತ ಶ್ರೀನಿವಾಸ್, ಕೃಷ್ಣರಾಜು, ಶಿವು, ಮಂಜು, ರವಿ ಸೇರಿದಂತೆ ಅಪಾರ ಅಭಿಮಾನಿಗಳು ಭಾಗವಹಿಸಿದ್ದರು,

## ಮಾದಕ ಮಾರ್ಜಾಲ ಸಚಿವರ ಆಪ್ತರ ಬಂಧನ




**ದಾವಣಗೆರೆ:** ಬೆಂಗಳೂರಲ್ಲಿ ಮಾದಕ ವಸ್ತು ತಯಾರಿಕ ಘಟಕದ ಮೇಲೆ ಮಹಾರಾಷ್ಟ್ರ ಪೊಲೀಸರು ದಾಳಿ ನಡೆಸಿದ ಬೆನ್ನಲ್ಲೇ ದಾವಣಗೆರೆಯಲ್ಲಿ ಡ್ರಗ್ಸ್ ದಂಧೆಯಲ್ಲಿ ಕಾಂಗ್ರೆಸ್ ಸಚಿವರ ಆಪ್ತರು ಅಂದರ್ ಆಗಿದ್ದಾರೆ. ಡ್ರಗ್ಸ್ ದಂಧೆ ನಡೆಸುತ್ತಿದ್ದ ಗ್ಯಾಂಗ್ ಮೇಲೆ ದಾವಣಗೆರೆ ಎಸ್‌ಪಿ ಉಮಾ ಪ್ರಶಾಂತ್ ನೇತೃತ್ವದಲ್ಲಿ ಇತ್ತೀಚೆಗೆ ದಾಳಿ ನಡೆದಿತ್ತು. ಈ ದಾಳಿಯಲ್ಲಿ ಕಾಂಗ್ರೆಸ್ ಮುಖಂಡ ಹಾಗೂ ದಾವಣಗೆರೆ ಉಸ್ತುವಾರಿ ಸಚಿವ ಮಲ್ಲಿಕಾರ್ಜುನ್ ಆಪ್ತ ವೇದಮೂರ್ತಿ ಸೇರಿ ನಾಲ್ವರು ಬಂಧನವಾಗಿತ್ತು.

ಬಂಧಿತರಿಂದ 290 ಗ್ರಾಂ ಎಂಡಿಎಂಎ ಡ್ರಗ್ಸ್, ಸಿಂಥೆಟಿಕ್ ಡ್ರಗ್ಸ್ ಸೇರಿ ಲಕ್ಷಾಂತರ ರೂ. ಮೌಲ್ಯದ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದರು. ಅದೇ ಪ್ರಕರಣದಲ್ಲಿ ವಸತಿ ಸಚಿವ ಜಮೀರ್ ಅಹ್ಮದ್ ಆಪ್ತ ಅನ್ವರ್ ಬಾಷಾ ಸೇರಿ ಪಾರಸ್, ಕೃಷ್ಣಮೂರ್ತಿ, ಧೋನಿ ಅಲಿಯಾಸ್ ಮಂಜುನಾಥ್ ಎಂಬವರನ್ನು ಪೊಲೀಸರು ಬಂಧಿಸಿದ್ದಾರೆ.

ಮಾದಕ ಮಾರ್ಜಾಲ ಸಚಿವರ ಆಪ್ತರಿಂದಲೇ ನಡೆಯುತ್ತಿದೆ. ಇದರಿಂದ ಸರ್ಕಾರಕ್ಕೆ ಭಾರೀ ಮುಜುಗರ ಉಂಟಾಗಿದೆ. ಪ್ರಕರಣವನ್ನು ಬಯಲಿಗೆಳೆದ ಲೇಡಿ ಸಿಂಗಂ ಎಸ್‌ಪಿ ಉಮಾ ಪ್ರಶಾಂತ್ ಕಾರ್ಯವೈಖರಿಗೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ. ಆದರೆ ಇದಕ್ಕೆ ಪ್ರತಿಕ್ರಿಯೆ ನೀಡಿದ ಸಚಿವ ಬೈರತಿ ಸುರೇಶ್ ಸಚಿವರುಗಳ ಜೊತೆ ಫೋಟೋ ಇದ್ದರೆ ಅವರು ಆಪ್ತರಾಗುತ್ತಾರಾ? ನಾನು ಕೂಡ ಸಾಕಷ್ಟು ಕಾರ್ಯಕ್ರಮಗಳಿಗೆ ಹೋಗುತ್ತೇವೆ. ಆಗ ನಮ್ಮ ಜೊತೆ ಸಾಕಷ್ಟು ಜನರು ಫೋಟೋ ತೆಗೆಸಿಕೊಳ್ಳುತ್ತಾರೆ. ಹಾಗಾದ್ರೆ ಅವರು ನಮ್ಮ ಆಪ್ತರಾಗುತ್ತಾರಾ ಎಂದು ಪ್ರಶ್ನಿಸಿ, ಸಚಿವರುಗಳ ಪರ ವಹಿಸಿ ಬ್ಯಾಟಿಂಗ್ ಮಾಡಿದ್ದಾರೆ.

## ತಂಗಿ ಜತೆ ಸೇರಿ ಪತ್ನಿಯ ಆಕಸ್ಮಿಕ ಸಾವು ಎಂದು ಬಿಂಬಿಸಿದ ಪತಿ ಅರೆಸ್ಟ್



**ಮುಂಬೈ:** ತಂಗಿ ಜತೆ ಸೇರಿ ಪತ್ನಿಯನ್ನು ಕೊಲೆಮಾಡಿ ಆಕಸ್ಮಿಕ ಸಾವು ಎಂದು ಬಿಂಬಿಸಲು ಯತ್ನಿಸಿದ ಆರೋಪದ ಮೇಲೆ ವಿರಾರ್‌ನ ಜಯಂತಿಲಾಲ್ ಸೋನಿ, ತಂಗಿ ದಿವಾಲಿಲಾಲ್ ಸೋನಿಯನ್ನು ಪೊಲೀಸರು ಬಂಧಿಸಿದ್ದಾರೆ. ತಮ್ಮ ನೆರೆಹೊರೆಯವರ ಸಹಾಯದಿಂದ ಕಲ್ಪನಾ ಸೋನಿ (36) ಅವರನ್ನು ಹತ್ತಿರದ ಆಸ್ಪತ್ರೆಗೆ ಕರೆದೊಯ್ದಾಗ ಘಟನೆ ಬೆಳಕಿಗೆ ಬಂದಿತ್ತು.

ದಂಪತಿ ನಡುವೆ ಆಗಾಗ ಜಗಳ ನಡೆಯುತ್ತಿತ್ತು ಮತ್ತು ಮಹಿಳೆಯ ಅತ್ತೆ-ಮಾವ ಕಿರುಕುಳ ನೀಡುತ್ತಿದ್ದರು ಎಂದು ಅಕ್ಕಪಕ್ಕದ ಮನೆಯವರು ಹೇಳಿದ್ದಾರೆಂದು ಪೊಲೀಸರಿಗೆ ತಿಳಿಸಿದ್ದಾರೆ. ದೇವಸ್ಥಾನಕ್ಕೆ ಭೇಟಿ ನೀಡಲು ಸಿದ್ಧವಾಗುತ್ತಿದ್ದಾಗ ಸ್ನಾನಗೃಹದಲ್ಲಿ ಜಾರಿ ಬಿದ್ದಿದ್ದಾಳೆ ಎಂದು ಅವರು ಹೇಳಿದ್ದರು.ಆಕೆಯ ದೇಹದ ಮೇಲೆ ಅನೇಕ ಗಾಯದ ಗುರುತುಗಳನ್ನು ಗಮನಿಸಿದ ನಂತರ ಆಸ್ಪತ್ರೆ ಅಧಿಕಾರಿಗಳು ಪೊಲೀಸರಿಗೆ ಮಾಹಿತಿ ನೀಡಿದರು.

ಆಕೆ ಬರುವಷ್ಟರಲ್ಲಿಯೇ ಮೃತಪಟ್ಟಿದ್ದಾರೆಂದು ಘೋಷಿಸಲಾಯಿತು.ಆಕೆಯ ದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿತ್ತು,ವರದಿಗಳ ಪ್ರಕಾರ ಕಲ್ಪನಾ ಅಸಹಜ ಸಾವು ಎಂದು ತಿಳಿದುಬಂದಿದೆ. ಜಯಂತಿಲಾಲ್ ಮತ್ತು ದಿವಾಲಿ ಕೊಲೆಯಲ್ಲಿ ಭಾಗಿಯಾಗಿದ್ದಾರೆಂದು ನಮ್ಮ ತನಿಖೆಯಿಂದ ತಿಳಿದುಬಂದ ನಂತರ, ನಾವು ಅವರನ್ನು ಬಂಧಿಸಿದ್ದೇವೆ" ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅತ್ತಿಗೆ ಶೌಚಾಲಯದಲ್ಲಿ ಬಿದ್ದು ರಕ್ತಸ್ರಾವವಾಗುತ್ತಿದ್ದು, ಆಸ್ಪತ್ರೆಗೆ ಸಾಗಿಸಲು ಸಹಾಯ ಕೇಳಿದ್ದಾರೆ ಎಂದು ಪಕ್ಕದ ಮನೆಯವರೊಬ್ಬರು ಹೇಳಿದ್ದಾರೆ. ಕಲ್ಪನಾ ಬಾತ್ರೂಮ್ ನೆಲದ ಮೇಲೆ ಪ್ರಜ್ಞಾಹೀನಳಾಗಿ ಬಿದ್ದಿದ್ದಳು, ಸೀರೆಯನ್ನು ಸಡಿಲವಾಗಿ ಉಟ್ಟುಕೊಂಡಿದ್ದಳು. ಅವರು ಆಭರಣಗಳನ್ನು ಧರಿಸಿದ್ದರು ಮತ್ತು ಹಣೆಯ ಮೇಲೆ ಸಿಂಧೂರವಿತ್ತು ಎಂದು ಪೊಲೀಸರಿಗೆ ತಿಳಿಸಿದ್ದಾರೆ.

ನಾವು ಆರೋಪಿಗಳನ್ನು ಬಂಧಿಸಿದ್ದೇವೆ ಮತ್ತು ಹೆಚ್ಚಿನ ತನಿಖೆ ನಡೆಯುತ್ತಿದೆ" ಎಂದು ಬೊಲಿಂಜ್ ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಮದುವೆಯಾಗು ಎಂದಿದ್ದಕ್ಕೆ ಕತ್ತು ಸೀಳಿ ಕೊಂದ ಪ್ರಿಯಕರ

ಬೆಂಗಳೂರು: ಕುಮಾರಸ್ವಾಮಿ ಲೇಔಟ್‌ನ ಮನೆಯೊಂದರಲ್ಲಿ ಒಂಟಿಯಾಗಿದ್ದ ಸ್ಟಾಫ್ ನರ್ಸ್ ಅನ್ನು ಭೀಕರವಾಗಿ ಹತ್ಯೆಗೈದ ಘಟನೆ ಡಿಸೆಂಬರ್ 24ರ ರಾತ್ರಿ ನಡೆದಿದೆ. ಆಕೆ ಬಾಡಿಗೆ ಮನೆಯಲ್ಲಿ ಒಂಟಿಯಾಗಿದ್ದ ಸಂದರ್ಭದಲ್ಲಿ ಮನೆಯೊಳಗೆ ಪ್ರವೇಶಿದ ಆಕೆಯ ಪ್ರಿಯಕರ, ಕತ್ತುಕುಯ್ದು ಆಕೆಯ ಹತ್ಯೆ ಮಾಡಿರುವುದು ತಿಳಿದುಬಂದಿದೆ. ಮಾಹಿತಿ ಸಿಕ್ಕ ಕೂಡಲೆ ಕುಮಾರಸ್ವಾಮಿ ಲೇಔಟ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದ್ದು, ಆರೋಪಿಯನ್ನು ಬಂಧಿಸಲಾಗಿದೆ. 39 ವರ್ಷವಾದರೂ ಮದುವೆಯಾಗದೆ ಒಂಟಿಯಾಗಿದ್ದ ಮಮತಾ, ಜಯದೇವ ಆಸ್ಪತ್ರೆಯಲ್ಲಿ ಸ್ಟಾಫ್ ನರ್ಸ್ ಆಗಿ ಸೇವೆ ಸಲ್ಲಿಸುತ್ತಿದ್ದರು. ಕುಮಾರಸ್ವಾಮಿ ಲೇಔಟ್‌ನಲ್ಲಿ ತಮ್ಮ ಸ್ನೇಹಿತೆಯೊಂದಿಗೆ ಬಾಡಿಗೆ ಮನೆ ಮಾಡಿಕೊಂಡಿದ್ದರು. ಡಿಸೆಂಬರ್ 24ರಂದು ಆಕೆಯ ಸ್ನೇಹಿತೆ ಊರಿಗೆ ತೆರಳಿದ್ದರಿಂದ ಆ ದಿನ ರಾತ್ರಿ ಮಮತಾ ಒಬ್ಬರೇ ಮನೆಯಲ್ಲಿದ್ದರು. ಇದೇ ಸಮಯಕ್ಕೆ ಕಾದು ಕುಳಿತಿದ್ದ ಆರೋಪಿ ಸುಧಾಕರ್, ರಾತ್ರೋ ರಾತ್ರಿ ಆಕೆಯ ಕತ್ತು ಸೀಳಿ ಹತ್ಯೆ ಮಾಡಿದ್ದಾನೆಂದು ತಿಳಿದುಬಂದಿದೆ. ಪ್ರಕರಣ ಬೆಳಕಿಗೆ ಬಂದಿದೆ. ಹತ್ಯೆಯ ಮಾಹಿತಿ

## ನಕಲಿ ಗೋಲ್ಡ್ ಲೋನ್ ಸೃಷ್ಟಿಸಿ ಕೋಟಿ ಕೋಟಿ ವಂಚನೆ

**ಬೆಂಗಳೂರು:** ಕೆನರಾ ಬ್ಯಾಂಕ್ ಶಾಖೆಯಲ್ಲಿ ಭಾರೀ ವಂಚನೆ ನಡೆದಿದ್ದು, ನಗರವಾಸಿಗಳಲ್ಲಿ ಆತಂಕ ಸೃಷ್ಟಿಸಿದೆ. ಬ್ಯಾಂಕ್‌ನ ಹಿರಿಯ ಮ್ಯಾನೇಜರ್ ವಿರುದ್ಧವೇ ನಕಲಿ ಗೋಲ್ಡ್ ಲೋನ್‌ಗಳನ್ನು ಸೃಷ್ಟಿಸಿದ ಆರೋಪ ಕೇಳಿಬಂದಿದ್ದು, ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ 3 ಕೋಟಿ ರೂ.ಗೂ ಹೆಚ್ಚು ವಂಚನೆ

ಮಲ್ಲೇಶ್ವರಂನ 15ನೇ ಕ್ರಾಸ್‌ನಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿ ನಕಲಿ ಗೋಲ್ಡ್ ಲೋನ್‌ಗಳನ್ನು ಸೃಷ್ಟಿಸಿ ಕೋಟಿ ಕೋಟಿ ರೂ. ಹಣ ಲೂಟಿ ಮಾಡಿರುವ ಆರೋಪ ಬ್ಯಾಂಕ್‌ನ ಹಿರಿಯ ವ್ಯವಸ್ಥಾಪಕ ಎನ್. ರಘು ವಿರುದ್ಧ ಕೇಳಿಬಂದಿದೆ. 2025ರ ಅಕ್ಟೋಬರ್ 4ರಿಂದ ಡಿಸೆಂಬರ್ 9ರವರೆಗೆ ಒಟ್ಟು 41 ಗ್ರಾಹಕರ ಖಾತೆಗಳಲ್ಲಿ ಚಿನ್ನವೇ ಇರದೆ ನಕಲಿ ಗೋಲ್ಡ್ ಲೋನ್‌ಗಳನ್ನು ಓಪನ್ ಮಾಡಿ, ಸುಮಾರು 3.11 ಕೋಟಿ ರೂ. ಹಣವನ್ನು ದುರುಪಯೋಗಪಡಿಸಿಕೊಂಡಿದ್ದಾನೆ ಎನ್ನಲಾಗಿದೆ.

ವಯೋವೃದ್ಧರು, ಪಿಂಚಣಿದಾರರು, ಅರ್ಚಕರು ಹಾಗೂ ಹೋಲ್‌ಸೇಲ್ ವ್ಯಾಪಾರಿಗಳನ್ನು ಟಾರ್ಗೆಟ್ ಮಾಡಿದ ಆರೋಪವಿದ್ದು, ಬ್ಯಾಂಕ್ ಕೆಲಸಕ್ಕೆ ಅಗತ್ಯವೆಂದು ಸುಳ್ಳು ಹೇಳಿ ಅವರಿಂದ ಒಟಿಪಿ ಮತ್ತು ಚೆಕ್ ಪಡೆದು ನಂಬಿಕೆ ದ್ರೋಹ ಮಾಡಲಾಗಿದೆ. ಗ್ರಾಹಕರಿಗೆ ತಿಳಿಯದೇ ಅವರ ಖಾತೆಗಳಲ್ಲಿ ಗೋಲ್ಡ್ ಲೋನ್ ತೆರೆದು ಹಣವನ್ನು ಡ್ರಾ ಮಾಡಿ ತನ್ನ ಖಾತೆಗೆ ವರ್ಗಾಯಿಸಿಕೊಂಡು ಎಸ್ಕೇಪ್ ಆಗಿದ್ದಾನೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಗ್ರಾಹಕರು ಎಚ್ಚರದಿಂದಿರುವಂತೆ ಸೂಚನೆ


ಈಗಾಗಲೇ ಕೆನರಾ ಬ್ಯಾಂಕ್ 41 ಖಾತೆಗಳನ್ನು ಫ್ರೀಜ್ ಮಾಡಿದ್ದು, ಯಾವುದೇ ಚಿನ್ನವಿಲ್ಲದೇ ಗ್ರಾಹಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ FIR ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ಈ ಘಟನೆಯ ನಂತರ ತಮ್ಮ ಖಾತೆಗಳಲ್ಲಿ ಯಾವುದೇ ಅನುಮಾನಾಸ್ಪದ ಲೋನ್ ಇದೆಯೇ ಎಂಬುದನ್ನು ತಕ್ಷಣ ಪರಿಶೀಲಿಸುವಂತೆ ಗ್ರಾಹಕರಿಗೆ ಸೂಚನೆ ನೀಡಲಾಗುತ್ತಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# SBI ಬ್ಯಾಂಕ್‌ನಲ್ಲಿದ್ದ ಹಣಕ್ಕೆ SBI ಸಿಬ್ಬಂದಿಯಿಂದಲೇ ಕನ್ನ

ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಯ ಹುಮ್ನಾಬಾದ್ ಶಾಖೆಯಲ್ಲಿ ಬ್ಯಾಂಕ್ ಸಿಬ್ಬಂದಿಯೇ ಗ್ರಾಹಕರ ಖಾತೆಗಳಿಂದ ಸುಮಾರು ₹1.25 ಕೋಟಿ ಮೋಸ ಮಾಡಿರುವ ಆಘಾತಕಾರಿ ಘಟನೆ ಬಯಲಾಗಿದೆ. ಬ್ಯಾಂಕ್‌ನ ATM ಮ್ಯಾನೇಜರ್ ಪ್ರವೀಣ್ ಎಂಬಾತ ಈ ಮೋಸಕ್ಕೆ ಮುಖ್ಯ ಆರೋಪಿ ಆಗಿದ್ದು, ಕೇವಲ 6 ತಿಂಗಳ ಅವಧಿಯಲ್ಲೇ ಈ ದೊಡ್ಡ ಮೊತ್ತವನ್ನು ಪಂಗನಾಮ ಮಾಡಿದ್ದಾನೆ.





ಪ್ರವೀಣ್ ಅವರು ಗ್ರಾಹಕರ ಖಾತೆಗಳಿಗೆ ಹೆಚ್ಚುವರಿ ಹಣವನ್ನು ಜಮಾ ಮಾಡಿದಂತೆ ತೋರಿಸಿ, ನಕಲಿ ವೋಚರ್‌ಗಳನ್ನು ಸೃಷ್ಟಿಸಿ ಹಣವನ್ನು ಹಿಂಡಿಸಿಕೊಂಡಿದ್ದಾರೆ. ಈ ಕೃತ್ಯವನ್ನು ಅವರು 48 ಬಾರಿ ಮಾಡಿದ್ದು, ಪ್ರತಿ ಬಾರಿಯೂ ಸಣ್ಣ ಮೊತ್ತದಲ್ಲಿ ಹಣ ಜಮಾ ಮಾಡಿ ನಂತರ ವಿಥ್‌ಡ್ರಾ ಮಾಡಿಕೊಂಡಿದ್ದಾರೆ. ಇದರಿಂದ ಬ್ಯಾಂಕ್‌ಗೆ ಭಾರೀ ನಷ್ಟ ಉಂಟಾಗಿದೆ.

ಈ ಮೋಸ ಬಯಲಾದ ಹಿನ್ನೆಲೆ, ಬ್ಯಾಂಕ್‌ನ ATMಗಳಿಗೆ ಹಣದ ಇಂಡೆಂಟ್ (ಹಣ ತುಂಬಿಸುವಿಕೆ) ಪಡೆದು ಪರಿಶೀಲನೆ ನಡೆಸಿದಾಗ ಈ ಅಕ್ರಮ ಕೃತ್ಯ ಬೆಳಕಿಗೆ ಬಂದಿದೆ. ಬ್ಯಾಂಕ್ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಿದಾಗ ನಕಲಿ ವೋಚರ್‌ಗಳು ಮತ್ತು ಅನುಮಾ ನಾಸ್ಪದ ವಹಿವಾಟುಗಳು ಕಂಡುಬಂದಿವೆ. ಘಟನೆಯ ಬಗ್ಗೆ ಹುಮ್ನಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರವೀಣ್ ವಿರುದ್ಧ ದೂರು ದಾಖಲಾಗಿದ್ದು, ತನಿಖೆ ಆರಂಭವಾಗಿದೆ. ಬ್ಯಾಂಕ್ ಅಧಿಕಾರಿಗಳು ಆಂತರಿಕ ತನಿಖೆಯನ್ನೂ ನಡೆಸುತ್ತಿದ್ದಾರೆ. ಈ ಘಟನೆಯಿಂದ ಗ್ರಾಹಕರಲ್ಲಿ ಬ್ಯಾಂಕ್ ವಹಿವಾಟುಗಳ ಬಗ್ಗೆ ಆತಂಕ ಮೂಡಿದೆ.

ಇತ್ತೀಚಿನ ದಿನಗಳಲ್ಲಿ ಕೆನರಾ ಬ್ಯಾಂಕ್, ಪೋಸ್ಟ್ ಆಫೀಸ್‌ಗಳಲ್ಲಿ ಸಿಬ್ಬಂದಿಯೇ ಮೋಸ ಮಾಡಿದ ಪ್ರಕರಣಗಳು ಬೆಳಕಿಗೆ ಬಂದಿದ್ದವು. ಈಗ SBIಯಲ್ಲೂ ಇಂಥ ಘಟನೆ ನಡೆದಿರುವುದು ಬ್ಯಾಂಕಿಂಗ್ ವ್ಯವಸ್ಥೆಯಲ್ಲಿ ಭದ್ರತೆಯ ಕುರಿತು ಪ್ರಶ್ನೆಗಳನ್ನು ಎತ್ತಿದೆ. ಗ್ರಾಹಕರು ತಮ್ಮ ಖಾತೆಗಳ ವಹಿವಾಟುಗಳನ್ನು ನಿಯಮಿ ತವಾಗಿ ಪರಿಶೀಲಿಸುವಂತೆ ಸಲಹೆ ನೀಡಲಾಗಿದೆ.

# ಚಿನ್ನದಂಗಡಿ ದರೋಡೆ: ರಾಬರಿ ಆಗಿದ್ದು 7 ಕೆ.ಜಿ ಬಂಗಾರ; ಡೈಮಂಡ್ ಕೂಡ ಕಳವು



**ಮೈಸೂರು**: ಹುಣಸೂರು ಪಟ್ಟಣದಲ್ಲಿ ಹಾಡಹಗಲೇ ಚಿನ್ನದಂಗಡಿ ದರೋಡೆ ಪ್ರಕರಣ ಸಂಬಂಧ ತನಿಖೆ ತೀವ್ರಗೊಂಡಿದೆ. ಹುಣಸೂರು ಬಸ್ ನಿಲ್ದಾಣದ ಹಿಂಭಾಗದ ಬೈಪಾಸ್ ರಸ್ತೆಯಲ್ಲಿರುವ ಸ್ಕೈ ಗೋಲ್ಡ್ ಅಂಡ್ ಡೈಮಂಡ್ಸ್ಗೆ ನುಗ್ಗಿದ್ದ 5 ಜನರ ಗ್ಯಾಂಗ್, ಸಿಬ್ಬಂದಿಗೆ ಗನ್ ತೋರಿಸಿ 7 ಕೆಜಿ ಚಿನ್ನ ಮತ್ತು ವಜ್ರ ದರೋಡೆ ಮಾಡಿ ಪರಾರಿಯಾಗಿತ್ತು. ಆರೋಪಿಗಳ ಪತ್ತೆಗೆ ಮೈಸೂರು ಎಸ್‌ಪಿ 5 ತಂಡ ರಚಿಸಿದ್ದು, ಗ್ಯಾಂಗ್‌ಗೆ ಖಾಕಿ ಬಲೆ ಬೀಸಿದೆ. ಚಿನ್ನದಂಗಡಿ ದರೋಡೆ ನಡೆಸಿ ದುಷ್ಕರ್ಮಿಗಳು ಎಸ್ಕೇಪ್ ಆಗಿರುವ ದೃಶ್ಯ ಟಿವಿ9ಗೆ ಲಭ್ಯವಾಗಿದೆ.

ಕೇವಲ ಐದೇ ಐದು ನಿಮಿಷಗಳಲ್ಲಿ ಗೋಲ್ಡ್ ಶಾಪ್ ರಾಬರಿ ನಡೆಸಲಾಗಿದ್ದು, ಕೆಜಿಗಟ್ಟಲೆ ಚಿನ್ನ ಕದ್ದು ಚಾಲಾಕಿಗಳು ಪರಾರಿಯಾಗಿದ್ದಾರೆ. ಮಧ್ಯಾಹ್ನ 2 ಗಂಟೆ 4 ನಿಮಿಷಕ್ಕೆ ಅಂಗಡಿಗೆ ಎಂಟ್ರಿಕೊಟ್ಟಿದ್ದ ಗ್ಯಾಂಗ್ 2 ಗಂಟೆ 9 ನಿಮಿಷಕ್ಕೆ ಶಾಪ್‌ನಿಂದ ತೆರಳಿದೆ. ಚಿನ್ನ ತೆಗೆದುಕೊಂಡ ಹೋಗಲು ಎರಡು ಚೀಲದಂತಹ ಬ್ಯಾಗ್ ತಂದಿದ್ದ ದರೋಡೆಕೋರರು, ಶೋಕೇಸ್‌ನಲ್ಲಿಟ್ಟಿದ್ದ ದೊಡ್ಡ ದೊಡ್ಡ ಗಾತ್ರದ ಆಭರಣವನ್ನ ಎರಡಲೇ ನಿಮಿಷದಲ್ಲಿ ಒಂದು ಕಡೆ ರಾಶಿ ಹಾಕಿದ್ದಾರೆ. ಬಳಿಕ ಮತ್ತೆರಡು ನಿಮಿಷದಲ್ಲಿ ದೊಡ್ಡ ಬ್ಯಾಗ್‌ಗೆ ಅವನ್ನು ತುಂಬಿಕೊಂಡು ಎಸ್ಕೇಪ್ ಆಗಿದ್ದಾರೆ. ಮ್ಯಾನೇಜರ್,

**ಸಿಬ್ಬಂದಿ ಸಮಯಪ್ರಜ್ಞೆ**

ಮ್ಯಾನೇಜರ್, ಸಿಬ್ಬಂದಿ ಸಮಯಪ್ರಜ್ಞೆಯಿಂದ ಪೂರ್ತಿ ಅಂಗಡಿ ದರೋಡೆ ಆಗುವುದು ತಪ್ಪಿದೆ. ಮಡಿಕೇರಿ, ವಿರಾಜಪೇಟೆ, ನೆಲಮಂಗಲ, ಕೇರಳ ಮತ್ತು ಯುಎಇಯಲ್ಲಿ ಚಿನ್ನದಂಗಡಿಯ ಬ್ರ್ಯಾಂಚ್ ಇದ್ದು, ಇವುಗಳೆಲ್ಲದರ ಸಿಸಿ ಕ್ಯಾಮರಾ ವಿಡಿಯೋ ಕೇರಳದ ಕೇಂದ್ರ ಕಚೇರಿಯಲ್ಲಿ ಲಭ್ಯವಿವೆ. ವಿಡಿಯೋ ನೋಡಿ ಮ್ಯಾನೇಜರ್ ಅಸ್ಗರ್‌ಗೆ ಕೇಂದ್ರ ಕಚೇರಿಯಿಂದ ಮಾಹಿತಿ ನೀಡಲಾಗಿದ್ದು, ಆ ವೇಳೆ ಊಟ ಮಾಡುತ್ತಿದ್ದ ಮ್ಯಾನೇಜರ್ ಅರ್ಧಕ್ಕೆ ಊಟ ಬಿಟ್ಟು ಓಡಿ ಬಂದಿದ್ದಾರೆ. ಅಂಗಡಿ ಲಾಕ್ ಮಾಡಲು ಯತ್ನಿಸಿದ ಮ್ಯಾನೇಜರ್ ಮೇಲೆ ಫೈರ್ ಮಾಡಲು ಆರೋಪಿಗಳು ಯತ್ನಿಸಿದ್ದಾರೆ.

ಅಲ್ಲಿಯವರೆಗೂ ಆರಾಮಾಗಿ ಭಯ ಇಲ್ಲದೆ ದರೋಡೆಗೆ ಮುಂದಾಗಿದ್ದ ಗ್ಯಾಂಗ್ ಮ್ಯಾನೇಜರ್ ಬಂದ ತಕ್ಷಣ ಆತುರಾತುರವಾಗಿ ಸಿಕ್ಕಷ್ಟು ಚಿನ್ನಾಭರಣ ಲೂಟಿ ಮಾಡಿ ಪರಾರಿಯಾಗಿದೆ. ದರೋಡೆ ನಡೆದಿರುವ ಚಿನ್ನಾಭರಣದ ಅಂಗಡಿಯನ್ನ ತಾತ್ಕಾಲಿಕವಾಗಿ ಪೊಲೀಸರು ಬಂದ್ ಮಾಡಿಸಿದ್ದಾರೆ. ಅಂಗಡಿ ಬಳಿ ತೆರಳದಂತೆ ನಿರ್ಬಂಧ ವಿಧಿಸಲಾಗಿದ್ದು, ಚಿನ್ನಾಭರಣ ಅಂಗಡಿ ಮಾಲೀಕ, ಮ್ಯಾನೇಜರ್, ಸಿಬ್ಬಂದಿ ವಿಚಾರಣೆ ನಡೆಸಲಾಗಿದೆ. ಆರೋಪಿಗಳ ಪತ್ತೆಗೆ ತನಿಖೆ ಮುಂದುವರಿದಿದೆ.

# ಪೊಲೀಸರಿಂದ ಬೆಂಗ್ಳೂರಲ್ಲಿ ಮಾದಕ ವಸ್ತು ಸೀಜ್ ಸರ್ಕಾರದ ವಿರುದ್ಧ ಹೋರಾಟ

**ಬೆಂಗಳೂರು:** ಮಹಾರಾಷ್ಟ್ರ ಪೊಲೀಸರಿಂದ ಬೆಂಗಳೂರಿನಲ್ಲಿ ಕೋಟ್ಯಾಂತರ ರೂಪಾಯಿ ಡ್ರಗ್ಸ್ ಸೀಜ್ ಮಾಡಿರುವ ವಿಚಾರಕ್ಕೆ ಸರ್ಕಾರದ ವಿರುದ್ಧ ಹೋರಾಟ ಮಾಡುವುದಾಗಿ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ. ಎಕ್ಸ್‌ನಲ್ಲಿ ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ನಿಖಿಲ್ ಕುಮಾರಸ್ವಾಮಿ ಅವರು, ಸರ್ಕಾರದ ವಿರುದ್ದ ಹೋರಾಟದ ಎಚ್ಚರಿಕೆ ನೀಡಿದ್ದಾರೆ




**ಎಕ್ಸ್‌ನಲ್ಲಿ ಏನಿದೆ?**

ರಾಜ್ಯದಲ್ಲಿ ನಡೆಯುತ್ತಿರುವ ಡ್ರಗ್ಸ್ ದಂಧೆಗೆ ರಾಜ್ಯ ಕಾಂಗ್ರೆಸ್ ಸರ್ಕಾರ ದಂಧೆಕೋರರನ್ನ ಬೆಂಬಲಿಸುತ್ತಿದೆ. ಕಳೆದ ಜುಲೈನಲ್ಲಿ ಮೈಸೂರಿನಲ್ಲಿ ಡ್ರಗ್ಸ್ ತಯಾರಿಕಾ ಘಟಕ ಪತ್ತೆ ಹಚ್ಚಿ, ಸುಮಾರು 390 ಕೋಟಿ ರೂ. ಮೌಲ್ಯದ 192 ಕೆ.ಜಿ. ಮೆಫೆಡ್ರೋನ್ ಡ್ರಗ್ಸ್‌ನ್ನು ಮಹಾರಾಷ್ಟ್ರ ಪೊಲೀಸರು ವಶಪಡಿಸಿಕೊಂಡಿದ್ದರು. ಇದೀಗ ಮತ್ತೆ ಬೆಂಗಳೂರಿನ 3 ಡ್ರಗ್ಸ್ ಫ್ಯಾಕ್ಟರಿ ಮೇಲೆ ದಾಳಿ ನಡೆಸಿ 56 ಕೋಟಿ ರೂ. ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡಿದ್ದಾರೆ. ರಾಜ್ಯದಲ್ಲಿ ಎಗ್ಗಿಲ್ಲದೆ ನಡೆಯುತ್ತಿರುವ ಡ್ರಗ್ಸ್ ದಂಧೆಗೆ ಕಡಿವಾಣ ಹಾಕುವಲ್ಲಿ ಕರ್ನಾಟಕ ಪೊಲೀಸ್ ಇಲಾಖೆ ಸಂಪೂರ್ಣ ವಿಫಲವಾಗಿದೆ.

ಈ ದಂಧೆಕೋರರನ್ನು ಪತ್ತೆ ಹಚ್ಚಲು ಮಹಾರಾಷ್ಟ್ರ ಪೊಲೀಸರು ಬರಬೇಕಾದರೆ, ಕರ್ನಾಟಕದ ಪೊಲೀಸ್ ಇಲಾಖೆ ಏನು ಮಾಡುತ್ತಿದೆ? ರಾಜ್ಯ ಗೃಹ ಇಲಾಖೆ, ಸಿಎಂ ಮತ್ತು ಡಿಸಿಎಂ ಭೋಜನ ಕೂಟಕ್ಕೆ ಮಾತ್ರ ಸೀಮಿತವಾಗಿದಿಯೇ? ಸರ್ಕಾರ ಈ ಕೂಡಲೇ ಯುವ ಜನಾಂಗಕ್ಕೆ ಮಾರಕವಾಗಿರುವ ಈ ಡ್ರಗ್ಸ್ ಮಾಫಿಯವನ್ನು ಗಂಭೀರವಾಗಿ ಪರಿಗಣಿಸಿ ಕಡಿವಾಣ ಹಾಕಬೇಕು. ಇಲ್ಲದಿದ್ದರೆ ಸರ್ಕಾರದ ವಿರುದ್ಧ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ನೀಡುತ್ತಿದ್ದೇನೆ ಎಂದು ಬರೆದುಕೊಂಡಿದ್ದಾರೆ

# KSRTC ಬಸ್‌ನಲ್ಲಿ ಬೆಕ್ಕಿನ ಮರಿಗೂ ಟಿಕೆಟ್

**ಮಡಿಕೇರಿ:** ಸಾಮಾನ್ಯವಾಗಿ ಯಾವುದೇ ಬಸ್‌ಗಳಲ್ಲಿ ವಯಸ್ಕರಿಗೆ ಪೂರ್ಣ ದರದ ಟಿಕೆಟ್, ವೃದ್ಧರಿಗೆ ಹಿರಿಯ ನಾಗರಿಕರ ಪಾಸ್ ಆಧರಿಸಿ ಹಾಗೂ ರಾಜ್ಯದ ಮಹಿಳೆಯರಿಗೆ ಉಚಿತ ಟಿಕೆಟ್ ನೀಡಲಾಗುತ್ತದೆ. ಮಕ್ಕಳಿಗೆ ಇದರಲ್ಲಿ ಶುಲ್ಕ ಕಡಿಮೆ ಇರುತ್ತದೆ.



ಆದ್ರೆ ಮೈಸೂರಿನಿಂದ ಮಡಿಕೇರಿಗೆ ಹೊರಟ ಬಸ್‌ನಲ್ಲಿ ಬೆಕ್ಕಿನ ಮರಿಗೂ ಶೇ.50 ರಷ್ಟು ಟಿಕೆಟ್ ಶುಲ್ಕ ತೆಗೆದುಕೊಂಡ ಘಟನೆ ನಡೆದಿದೆ. ಹೌದು. ಮೈಸೂರು-ಮಡಿಕೇರಿ ಮಾರ್ಗದ ಕೆಎಸ್‌ಆರ್‌ಸಿ ಬಸ್‌ನಲ್ಲಿ ಕಂಡಕ್ಟರ್ ಬೆಕ್ಕಿನ ಮರಿಗೆ ಸೀಟ್ ರಹಿತ ಶೇ.50 ಬಸ್ ಟಿಕೆಟ್ ಶುಲ್ಕ ತೆಗೆದುಕೊಂಡ ವಿಚಿತ್ರ ಘಟನೆ ನಡೆದಿದೆ.

ಈ ಟಿಕೇಟ್ ಫೋಟೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ ರಾಜ್ಯದಲ್ಲಿ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಆಧಾರ್ ಅಥವಾ ಐಡಿ ಕಾರ್ಡ್ ತೋರಿಸಿ ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡಬಹುದಾಗಿದೆ. ಆದರೀಗ ಮೈಸೂರು - ಮಡಿಕೇರಿ ಕೆಎಸ್‌ಆರ್‌ಟಿಸಿ ಬಸ್ಸಿನಲ್ಲಿ ಬೆಕ್ಕಿನ ಮರಿಗೂ ಟಿಕೆಟ್ ಕೊಡಲಾಗಿದೆ. ಟಿಕೆಟ್ ತೆಗೆದುಕೊಂಡರೂ ಸಹ ಆ ಬೆಕ್ಕಿನ ಮರಿಗೆ ಸೀಟ್ ನೀಡಿಲ್ಲ ಎನ್ನುವ ವಿಚಾರ ಚರ್ಚೆಗೆ ಗ್ರಾಸವಾಗಿದೆ.

# ಬಾರ್‌ನಲ್ಲಿ ಸಿಗರೇಟ್‌ಗಾಗಿ ಗಲಾಟೆ ಹಲ್ಲೆ

**ಚಿಕ್ಕಮಗಳೂರು:** ನಗರದ ಹೊರವಲಯದಲ್ಲಿ ಸಿಗರೇಟ್ ಖರೀದಿ ವಿಚಾರಕ್ಕೆ ಆರಂಭವಾದ ಜಗಳ ಭೀಕರ ರೂಪ ಪಡೆದು, ಚಾಕುವಿನಿಂದ ಇರಿದು ಯುವಕನಿಗೆ ಗಂಭೀರ ಹಲ್ಲೆಯಾಗಿದೆ. ಘಟನೆ ಅಕ್ಷಯ್ ಬಾರ್ ಆಂಡ್ ರೆಸ್ಟೋರೆಂಟ್‌ನಲ್ಲಿ ನಡೆದಿದ್ದು, ಮುಗ್ತಿಹಳ್ಳಿ ನಿವಾಸಿ ಅನಿಲ್ ಕುಮಾರ್ ಎಂಬಾತನಿಗೆ ಚಾಕುವಿನಿಂದ ಇರಿದು ಗಾಯಗೊಳಿಸಲಾಗಿದೆ. ಆರೋಪಿ ಲಿಖಿತ್ ಎಂಬ ಯುವಕನನ್ನು ಚಿಕ್ಕಮಗಳೂರು ನಗರ ಪೊಲೀಸರು ಬಂಧಿಸಿದ್ದಾರೆ.

ರಾತ್ರಿ ಸುಮಾರು 10 ಗಂಟೆಯ ನಂತರ ನಡೆದ ಈ ಘಟನೆಯಲ್ಲಿ ಎರಡು ಗುಂಪುಗಳ ನಡುವೆ ಸಿಗರೇಟ್ ವಿಚಾರಕ್ಕೆ ಮಾತಿನ ಚಕಮಕಿ ಆರಂಭವಾಗಿತ್ತು. ಜಗಳ ತೀವ್ರಗೊಂಡು ಒಬ್ಬರು ಚಾಕು ತೆಗೆದು ಅನಿಲ್ ಕುಮಾರ್ ಅವರನ್ನು ಎದೆ, ಹೊಟ್ಟೆ ಮತ್ತು ಕೈಗಳಲ್ಲಿ ಇರಿದಿದ್ದಾರೆ. ಗಾಯಾಳು ರಕ್ತಸಿಕ್ತರಾಗಿ ಕೆಳಗೆ ಬಿದ್ದಿದ್ದು, ಬಾರ್‌ನಲ್ಲಿದ್ದ ಗ್ರಾಹಕರು ಮತ್ತು ಸಿಬ್ಬಂದಿ ಆತಂಕಕ್ಕೀಡಾಗಿದ್ದಾರೆ. ಘಟನೆಯ ಸಂಪೂರ್ಣ ದೃಶ್ಯ ಬಾರ್‌ನ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ವೀಡಿಯೊದಲ್ಲಿ ಎರಡು ಗುಂಪುಗಳು ಜಗಳ ಆರಂಭಿಸಿ, ಚಾಕು ತೆಗೆದು ಹಲ್ಲೆ ಮಾಡುವುದು ಸ್ಪಷ್ಟವಾಗಿ ಕಂಡಿದೆ.



ಈ ವೀಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಜನರಲ್ಲಿ ಆಕ್ರೋಶ ಮೂಡಿಸಿದೆ. ಗಂಭೀರವಾಗಿ ಗಾಯಗೊಂಡ ಅನಿಲ್ ಕುಮಾರ್ ಅವರನ್ನು ಮೊದಲು ಚಿಕ್ಕಮಗಳೂರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಗಾಯಗಳು ತೀವ್ರವಾಗಿದ್ದರಿಂದ ಹಾಸನದ ಸರ್ಕಾರಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಪ್ರಸ್ತುತ ಅವರು ತೀವ್ರ ನಿಗಾ ಘಟಕದಲ್ಲಿ (ICU) ಚಿಕಿತ್ಸೆ ಪಡೆಯುತ್ತಿದ್ದಾರೆ. ವೈದ್ಯರು ಅವರ ಆರೋಗ್ಯ ಸ್ಥಿರವಾಗಿದೆ ಎಂದು ತಿಳಿಸಿದ್ದಾರೆ.


ಘಟನೆಯ ಬಳಿಕ ಆರೋಪಿ ಲಿಖಿತ್ ಸ್ಥಳದಿಂದ ತಪ್ಪಿಸಿಕೊಂಡಿದ್ದ. ಆದರೆ ಸಿಸಿಟಿವಿ ದೃಶ್ಯಗಳು ಮತ್ತು ಸಾಕ್ಷಿಗಳ ಹೇಳಿಕೆಯ ಆಧಾರದಲ್ಲಿ ಪೊಲೀಸರು ಆತನನ್ನು ಭಾನುವಾರ ಬಂಧಿಸಿದ್ದಾರೆ. ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆರೋಪಿಯಿಂದ ಚಾಕು ವಶಪಡಿಸಿಕೊಳ್ಳಲಾಗಿದೆ.

ಈ ಘಟನೆ ಚಿಕ್ಕಮಗಳೂರು ನಗರದಲ್ಲಿ ಆತಂಕ ಮೂಡಿಸಿದೆ. ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಮದ್ಯ ಸೇವಿಸಿ ಗಲಾಟೆ ಮಾಡುವ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿ ಎಂದು ಸ್ಥಳೀಯರು ಹೇಳಿದ್ದಾರೆ. ಅಬಕಾರಿ ಇಲಾಖೆ ಮತ್ತು ಪೊಲೀಸರು ಬಾರ್‌ಗಳ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂಬ ಒತ್ತಾಯ ಕೇಳಿಬಂದಿದೆ.

ಬಾರ್ ಮಾಲೀಕರು ಸಿಸಿ ಕ್ಯಾಮೆರಾ ಅಳವಡಿಸಿ, ಸಿಬ್ಬಂದಿ ಮೂಲಕ ಭದ್ರತೆ ಕಲ್ಪಿಸಬೇಕು ಎಂದು ಪೊಲೀಸರು ಸೂಚಿಸಿದ್ದಾರೆ. ಈ ಘಟನೆಯಿಂದ ಮದ್ಯಪಾನ ಮತ್ತು ಗಲಾಟೆಯ ಸಮಸ್ಯೆಯ ಬಗ್ಗೆ ಮತ್ತೊಮ್ಮೆ ಚರ್ಚೆ ಆರಂಭವಾಗಿದೆ. ಸಮಾಜದಲ್ಲಿ ಮದ್ಯದ ದುಶ್ಚಟಕ್ಕೆ ಕಡಿವಾಣ ಹಾಕಬೇಕು ಎಂಬ ಧ್ವನಿ ಎತ್ತರವಾಗಿದೆ.

ಪೊಲೀಸರು ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿದ್ದು, ಇತರ ಆರೋಪಿಗಳು ಇದ್ದರೆ ಬಂಧಿಸಲಾಗುವುದು ಎಂದು ತಿಳಿಸಿದ್ದಾರೆ. ಗಾಯಾಳು ಅನಿಲ್ ಕುಮಾರ್ ಶೀಘ್ರ ಗುಣಮುಖರಾಗಲಿ ಎಂದು ಆಶಿಸೋಣ.

# ಎರಡು ಹೆಲಿಕಾಪ್ಟರ್ ಡಿಕ್ಕಿ: ಓರ್ವ ಪೈಲಟ್ ಸಾವು, ಮತ್ತೊಬ್ಬರು ಗಂಭೀರ



**ಅಮೆರಿಕ:** ನ್ಯೂಜೆರ್ಸಿ ರಾಜ್ಯದ ಹ್ಯಾಮಂಟನ್ ಬಳಿ ಭೀಕರ ಹೆಲಿಕಾಪ್ಟರ್ ಅಪಘಾತ ಸಂಭವಿಸಿದೆ. ಎರಡು ಹಗುರ ತೂಕದ ಹೆಲಿಕಾಪ್ಟರ್‌ಗಳು ಆಕಾಶದಲ್ಲೇ ಮುಖಾಮುಖಿ ಡಿಕ್ಕಿ ಹೊಡೆದು ಕೆಳಗೆ ಬಿದ್ದಿವೆ. ಸ್ಥಳೀಯ ಸಮಯ ಸುಮಾರು ಬೆಳಗ್ಗೆ 11:25ಕ್ಕೆ (ಭಾರತೀಯ ಸಮಯ ಸಂಜೆ 4:55) ನಡೆದ ಈ ದುರಂತದಲ್ಲಿ ಒಬ್ಬ ಪೈಲಟ್ ಸಾವನ್ನಪ್ಪಿದ್ದು, ಮತ್ತೊಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ಮತ್ತು ಹ್ಯಾಮಂಟನ್ ಪೊಲೀಸ್ ಇಲಾಖೆ ತಿಳಿಸಿದೆ.

ಅಪಘಾತದಲ್ಲಿ ತೊಡಗಿಕೊಂಡಿದ್ದ ಎರಡು ಹೆಲಿಕಾಪ್ಟರ್‌ಗಳಲ್ಲಿ ಕೇವಲ ಪೈಲಟ್‌ಗಳು ಮಾತ್ರ ಇದ್ದರು ಪ್ರಯಾಣಿಕರಿಲ್ಲ. ಡಿಕ್ಕಿಯ ನಂತರ ಒಂದು ಹೆಲಿಕಾಪ್ಟರ್ ಸಂಪೂರ್ಣ ಬೆಂಕಿಯಲ್ಲಿ ಮುಳುಗಿ ನೆಲಕ್ಕೆ ಅಪ್ಪಳಿಸಿತು, ಮತ್ತೊಂದು ಕಾಡಿನಲ್ಲಿ ಬಿದ್ದು ನಜ್ಜುಗುಜ್ಜಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ವೀಡಿಯೊಗಳು ಹೆಲಿಕಾಪ್ಟರ್‌ಗಳು ನಿಯಂತ್ರಣ ತಪ್ಪಿ ತಿರುಗುತ್ತಾ ಕೆಳಗೆ ಬೀಳುತ್ತಿರುವ ಭಯಾನಕ ದೃಶ್ಯಗಳನ್ನು ತೋರಿಸುತ್ತವೆ. ಹ್ಯಾಮಂಟನ್ ಪೊಲೀಸ್ ಮುಖ್ಯಸ್ಥ ಕೆವಿನ್ ಫ್ರೀಲ್ ಅವರು, "ಎರಡು ಹೆಲಿಕಾಪ್ಟರ್‌ಗಳು ಒಟ್ಟಿಗೆ ಹಾರುತ್ತಿದ್ದವು . ಹತ್ತಿರದಲ್ಲಿ ಹಾರುತ್ತಿದ್ದುದೇ ಡಿಕ್ಕಿಗೆ ಕಾರಣವಾಗಿರಬಹುದು" ಎಂದು ಹೇಳಿದ್ದಾರೆ. ಸ್ಥಳೀಯರು ದೊಡ್ಡ ಸದ್ದು ಕೇಳಿ ಆಕಾಶ ನೋಡಿದಾಗ ಹೆಲಿಕಾಪ್ಟರ್‌ಗಳು ತಿರುಗುತ್ತಾ ಬೀಳುತ್ತಿರುವುದನ್ನು ಕಂಡಿದ್ದಾರೆ. ಒಬ್ಬ ಸಾಕ್ಷಿಯಾದ ಡ್ಯಾನ್ ಡೇಮ್‌ಶೆಕ್ ಅವರು, "ದೊಡ್ಡ ಸ್ಫೋಟದ ಸದ್ದು ಕೇಳಿ ನೋಡಿದಾಗ ಒಂದು ಹೆಲಿಕಾಪ್ಟರ್ ತಿರುಗುತ್ತಾ ಬೀಳುತ್ತಿತ್ತು, ನಂತರ ಎರಡನೇಯದೂ" ಎಂದು ಹೇಳಿದ್ದಾರೆ.



ತುರ್ತು ಸೇವೆಗಳು ತಕ್ಷಣ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಿದವು ಮತ್ತು ರಕ್ಷಣಾ ಕಾರ್ಯ ನಡೆಸಿದವು. ಗಾಯಗೊಂಡ ಪೈಲಟ್‌ನ್ನು ಹೆಲಿಕಾಪ್ಟರ್ ಮೂಲಕ ಆಸ್ಪತ್ರೆಗೆ ಕಳುಹಿಸಲಾಗಿದೆ. ಅಪಘಾತದ ಸ್ಥಳದಲ್ಲಿ ದಟ್ಟ ಹೊಗೆ ಮತ್ತು ಜ್ವಾಲೆಗಳು ಕಾಣಿಸಿಕೊಂಡಿದ್ದವು. ಒಂದು ಹೆಲಿಕಾಪ್ಟರ್‌ನ ಬಾಲ ಭಾಗ ಮಾತ್ರ ಉಳಿದಿದ್ದು, ಉಳಿದ್ದು ಸುಟ್ಟು ಭಸ್ಮವಾಗಿದೆ. ಮತ್ತೊಂದರ ಕಾಕ್‌ಪಿಟ್ ನಜ್ಜುಗುಜ್ಜಾಗಿದೆ.

ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ಮತ್ತು ರಾಷ್ಟ್ರೀಯ ಸಾರಿಗೆ ಸುರಕ್ಷತಾ ಮಂಡಳಿ ತನಿಖೆ ಆರಂಭಿಸಿವೆ. ಡಿಕ್ಕಿಗೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ, ಆದರೆ ನಿಯಮ ಉಲ್ಲಂಘನೆಯೇ ಮುಖ್ಯ ಕಾರಣ ಎಂಬ ಅನುಮಾನ ವ್ಯಕ್ತವಾಗಿದೆ. ಹ್ಯಾಮಂಟನ್ ಸುಮಾರು 15,000 ಜನಸಂಖ್ಯೆ ಹೊಂದಿದ ಸಣ್ಣ ಪಟ್ಟಣವಾಗಿದ್ದು, ಫಿಲಡೆಲ್ಫಿಯಾದಿಂದ 35 ಮೈಲಿ ದೂರದಲ್ಲಿದೆ. ಈ ದುರಂತದಿಂದ ಸ್ಥಳೀಯರು ಆತಂಕಗೊಂಡಿದ್ದಾರೆ. ಅಮೆರಿಕದಲ್ಲಿ ಹೆಲಿಕಾಪ್ಟರ್ ಸುರಕ್ಷತೆಯ ಬಗ್ಗೆ ಮತ್ತೊಮ್ಮೆ ಚರ್ಚೆ ಆರಂಭವಾಗಿದೆ. ಮೃತ ಪೈಲಟ್‌ನ ಕುಟುಂಬಕ್ಕೆ ಸಂತಾಪ ಸೂಚಿಸುತ್ತೇವೆ. ತನಿಖೆಯಿಂದ ಸತ್ಯ ಬಯಲಾಗಲಿ ಎಂದು ಆಶಿಸೋಣ.

# ಕನ್ನಡ ಪಾಠಶಾಲೆಗೆ ಪ್ರಧಾನಿ ಶ್ಲಾಘನೆ



ಪ್ರಧಾನಿ ನರೇಂದ್ರ ಮೋದಿ ಅವರ ಜನಪ್ರಿಯ ರೇಡಿಯೋ ಕಾರ್ಯಕ್ರಮ ಮನ್ ಕಿ ಬಾತ್ನ 129ನೇ ಸಂಚಿಕೆ ಇಂದು ಪ್ರಸಾರವಾಯಿತು. 2025ರ ಕೊನೆಯ ಸಂಚಿಕೆಯಲ್ಲಿ ಪ್ರಧಾನಿ ಅವರು ವರ್ಷದ ಸಾಧನೆಗಳನ್ನು ಸ್ಮರಿಸುತ್ತಾ, ದುಬೈನಲ್ಲಿ ನಡೆಯುತ್ತಿರುವ ಕನ್ನಡ ಪಾಠಶಾಲೆಯನ್ನು ವಿಶೇಷವಾಗಿ ಶ್ಲಾಘಿಸಿದ್ದಾರೆ. ಅನಿವಾಸಿ ಕನ್ನಡಿಗರು ತಮ್ಮ ಮಕ್ಕಳಿಗೆ ಮಾತೃಭಾಷೆ ಕಲಿಸುವ ಈ ಉದ್ಯಮಕ್ಕೆ ಮೋದಿ ಅವರು ಹೃತ್ಪೂರ್ವಕ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಪ್ರಧಾನಿ ಮೋದಿ ಅವರು ತಮ್ಮ ಭಾಷಣದಲ್ಲಿ ಹೇಳಿದಂತೆ, "ದುಬೈನಲ್ಲಿ ವಾಸಿಸುತ್ತಿರುವ ಕನ್ನಡ ಕುಟುಂಬಗಳು ಒಂದು ಮುಖ್ಯ ಪ್ರಶ್ನೆಯನ್ನು ತಮ್ಮೊಂದಿಗೆ ಕೇಳಿಕೊಂಡರು: ನಮ್ಮ ಮಕ್ಕಳು ತಂತ್ರಜ್ಞಾನದ ಜಗತ್ತಿನಲ್ಲಿ ಮುಂದುವರೆಯುತ್ತಿದ್ದಾರೆ, ಆದರೆ ಅವರು ತಮ್ಮ ಭಾಷೆಯಿಂದ ದೂರವಾಗುತ್ತಿದ್ದಾರೆಯೇ? ಈ ಚಿಂತನೆಯಿಂದ ಹುಟ್ಟಿದ್ದೇ ಕನ್ನಡ ಪಾಠಶಾಲೆ. ಇಲ್ಲಿ ಮಕ್ಕಳಿಗೆ ಕನ್ನಡ ಓದಲು, ಬರೆಯಲು, ಕಲಿಯಲು ಮತ್ತು ಮಾತನಾಡಲು ಕಲಿಸುತ್ತಾರೆ." ಈ ಶಾಲೆಯಲ್ಲಿ ಇಂದು 1000ಕ್ಕೂ ಹೆಚ್ಚು ಮಕ್ಕಳು ಭಾಗವಹಿಸುತ್ತಿದ್ದಾರೆ ಎಂದು ಮೋದಿ ಉಲ್ಲೇಖಿಸಿದರು. "ಕನ್ನಡ ನಾಡು-ನುಡಿ ನಮ್ಮ ಹೆಮ್ಮೆ" ಎಂದು ಅವರು ಉತ್ಸಾಹದಿಂದ ಹೇಳಿದರು. ದುಬೈ ಕನ್ನಡ ಪಾಠಶಾಲೆ 2014ರಿಂದ ಕಾರ್ಯನಿರ್ವಹಿಸುತ್ತಿದ್ದು, ಅನಿವಾಸಿ ಕನ್ನಡಿಗರ ಮಕ್ಕಳಿಗೆ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ಪ್ರಧಾನಿ ಅವರ ಈ ಶ್ಲಾಘನೆಯಿಂದ ಕನ್ನಡಿಗರಲ್ಲಿ ಉತ್ಸಾಹ ಮೂಡಿದ್ದು, ಸೋಶಿಯಲ್ ಮೀಡಿಯಾದಲ್ಲಿ ಈ ವಿಷಯ ವೈರಲ್ ಆಗುತ್ತಿದೆ.

ಇದೇ ಸಂಚಿಕೆಯಲ್ಲಿ ಪ್ರಧಾನಿ ಅವರು ಬೆಂಗಳೂರಿನ ಐಐಎಸ್‌ಸಿ ಯ ಗೀತಾಂಜಲಿ ಕಾರ್ಯಕ್ರಮವನ್ನು ಕೂಡ ಮೆಚ್ಚಿದ್ದಾರೆ. ಸಣ್ಣ ಸಂಗೀತ ತರಗತಿಯಾಗಿ ಆರಂಭವಾದ ಗೀತಾಂಜಲಿ ಇಂದು ಕ್ಯಾಂಪಸ್‌ನ ಸಾಂಸ್ಕೃತಿಕ ಕೇಂದ್ರವಾಗಿ ಬೆಳೆದಿದೆ. ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಜಾನಪದ ಸಂಪ್ರದಾಯಗಳು ಮತ್ತು ಶಾಸ್ತ್ರೀಯ ಪ್ರಕಾರಗಳನ್ನು ಒಳಗೊಂಡಿರುವ ಈ ಉದ್ಯಮದಲ್ಲಿ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಮತ್ತು ಅವರ ಕುಟುಂಬಗಳು ಭಾಗವಹಿಸುತ್ತಾರೆ. 200ಕ್ಕೂ ಹೆಚ್ಚು ಜನರು ಇದರೊಂದಿಗೆ ಸಂಪರ್ಕದಲ್ಲಿದ್ದಾರೆ ಎಂದು ಮೋದಿ ತಿಳಿಸಿದರು.

2025ರ ಸಾಧನೆಗಳನ್ನು ಸ್ಮರಿಸಿದ ಪ್ರಧಾನಿ, ರಾಷ್ಟ್ರೀಯ ಭದ್ರತೆ, ಕ್ರೀಡೆ, ವಿಜ್ಞಾನ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಭಾರತದ ಪ್ರಗತಿಯನ್ನು ಹೈಲೈಟ್ ಮಾಡಿದರು. 2026ಕ್ಕೆ ಹೊಸ ಆಶಯಗಳೊಂದಿಗೆ ಮುಂದುವರೆಯೋಣ ಎಂದು ಅವರು ಕರೆ ನೀಡಿದರು. ಪ್ರಧಾನಿ ಅವರ ಈ ಮಾತುಗಳು ಕನ್ನಡಿಗರಿಗೆ ಹೆಮ್ಮೆಯ ಕ್ಷಣವನ್ನು ತಂದಿಟ್ಟಿದ್ದು, ಭಾಷಾ ಪ್ರೇಮವನ್ನು ಜಾಗತಿಕ ಮಟ್ಟದಲ್ಲಿ ಗುರುತಿಸುವಂತೆ ಮಾಡಿದೆ.

# ಅಗ್ನಿ ಅವಘಡ, 158 ಪ್ರಯಾಣಿಕರಿದ್ದ 2 ಬೋಗಿಗಳಿಗೆ ಬೆಂಕಿ, ಓರ್ವ ಸಾವು



**ಆಂಧ್ರಪ್ರದೇಶ:** ಅನಕಾಪಲ್ಲಿ ಜಿಲ್ಲೆಯ ಯಲಮಂಚಿಲಿ ಬಳಿ ಟಾಟಾನಗರ್ -ಎರ್ನಾಕುಲಂ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 18189) ರೈಲಿನ ಎರಡು ಏಸಿ ಬೋಗಿಗಳು (B1 ಮತ್ತು M2) ಭಾರೀ ಬೆಂಕಿಗೆ ಆಹುತಿಯಾಗಿವೆ. ಮಧ್ಯರಾತ್ರಿ ಸುಮಾರು 12:45ರಿಂದ 1:30ರ ನಡುವೆ ನಡೆದ ಈ ಅಗ್ನಿ ಅವಘಡದಲ್ಲಿ 70 ವರ್ಷದ ಚಂದ್ರಶೇಖರ್ ಸುಂದರಂ ಎಂಬ ಪ್ರಯಾಣಿಕ ಸಾವನ್ನಪ್ಪಿದ್ದಾರೆ. ಮೃತರು ವಿಜಯವಾಡ ನಿವಾಸಿಯಾಗಿದ್ದು, B1 ಬೋಗಿಯಲ್ಲಿ ಸಿಲುಕಿ ಸುಟ್ಟು ಸಾವನ್ನಪ್ಪಿದ್ದಾರೆ ಎಂದು ಅನಕಾಪಲ್ಲಿ ಎಸ್‌ಪಿ ತುಹಿನ್ ಸಿನ್ಹಾ ತಿಳಿಸಿದ್ದಾರೆ. ಘಟನೆಯ ಸಮಯದಲ್ಲಿ ಒಂದು ಬೋಗಿಯಲ್ಲಿ 82 ಪ್ರಯಾಣಿಕರು ಮತ್ತು ಇನ್ನೊಂದರಲ್ಲಿ 76 ಪ್ರಯಾಣಿಕರು (ಒಟ್ಟು 158) ಇದ್ದರು. ಲೋಕೋ ಪೈಲಟ್ ಬೆಂಕಿ ಗಮನಿಸಿ ತಕ್ಷಣ ರೈಲನ್ನು ನಿಲ್ಲಿಸಿದ್ದರಿಂದ ಹೆಚ್ಚಿನ ಪ್ರಯಾಣಿಕರು ಸುರಕ್ಷಿತವಾಗಿ ಹೊರಬಂದರು.

ಆದರೆ ಚಂದ್ರಶೇಖರ್ ಸುಂದರಂ ಅವರು ಬೋಗಿಯೊಳಗೆ ಸಿಲುಕಿಕೊಂಡು ದುರಂತಕ್ಕೀಡಾಗಿದ್ದಾರೆ. ಬೆಂಕಿ ತೀವ್ರವಾಗಿದ್ದರಿಂದ ಎರಡು ಬೋಗಿಗಳು ಸಂಪೂರ್ಣ ಧ್ವಂಸವಾಗಿವೆ ಮತ್ತು ಪ್ರಯಾಣಿಕರ ಸಾಮಾನುಗಳು ಸುಟ್ಟು ಭಸ್ಮವಾಗಿವೆ ಯಲಮಂಚಿಲಿ ರೈಲು ನಿಲ್ದಾಣದ ಬಳಿ ನಡೆದ ಈ ಘಟನೆಯನ್ನು ಗಮನಿಸಿದ ರೈಲ್ವೆ ಸಿಬ್ಬಂದಿ ತಕ್ಷಣ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದರು. ಬೆಂಕಿ ದಳಗಳು ಆಗಮಿಸಿ ಬೆಂಕಿ ನಂದಿಸಿದವು. ಹಾನಿಗೊಳಗಾದ ಬೋಗಿಗಳನ್ನು ರೈಲಿನಿಂದ ಬೇರ್ಪಡಿಸಿ, ಉಳಿದ ರೈಲು ಎರ್ನಾಕುಲಂ ಕಡೆಗೆ ಮುಂದುವರಿದಿದೆ. ಹಾನಿಗ್ರಸ್ತ ಪ್ರಯಾಣಿಕರನ್ನು ಬಸ್‌ಗಳ ಮೂಲಕ ಸಮರ್ಲಕೋಟೆಗೆ ಕಳುಹಿಸಲಾಗಿದ್ದು, ಅಲ್ಲಿ ಹೊಸ ಏಸಿ ಬೋಗಿಗಳನ್ನು ಜೋಡಿಸಿ ಪ್ರಯಾಣ ಮುಂದುವರಿಸಲಾಗಿದೆ.

ಬೆಂಕಿಯ ಕಾರಣ ಕುರಿತು ಇನ್ನೂ ಸ್ಪಷ್ಟ ಮಾಹಿತಿ ಲಭ್ಯವಿಲ್ಲ. ಶಾರ್ಟ್ ಸರ್ಕ್ಯೂಟ್ ಅಥವಾ ಪ್ಯಾಂಟ್ರಿ ಕಾರ್ ಸಮೀಪದಿಂದ ಬೆಂಕಿ ಹರಡಿರಬಹುದು ಎಂಬ ಅನುಮಾನ ವ್ಯಕ್ತವಾಗಿದೆ. ಎರಡು ವಿಧಿವಿಜ್ಞಾನ ತಂಡಗಳು ಸ್ಥಳಕ್ಕೆ ಆಗಮಿಸಿ ತನಿಖೆ ನಡೆಸುತ್ತಿವೆ. ರೈಲ್ವೆ ಅಧಿಕಾರಿಗಳು ಸಹ ಹೆಲ್ಪ್‌ಲೈನ್ ಸಂಖ್ಯೆಗಳನ್ನು ಘೋಷಿಸಿ ಪ್ರಯಾಣಿಕರಿಗೆ ಸಹಾಯ ಮಾಡುತ್ತಿದ್ದಾರೆ.

ಈ ಘಟನೆಯಿಂದ ವಿಶಾಖಪಟ್ಟಣಂ -ವಿಜಯವಾಡ ಮಾರ್ಗದಲ್ಲಿ ಕೆಲವು ರೈಲುಗಳ ಸಂಚಾರಕ್ಕೆ ತಾತ್ಕಾಲಿಕ ಅಡಚಣೆ ಉಂಟಾಗಿದೆ. ರೈಲ್ವೆ ಸುರಕ್ಷತೆ ಕುರಿತು ಮತ್ತೊಮ್ಮೆ ಚರ್ಚೆಗೆ ಗ್ರಾಸವಾಗಿದೆ. ಕಳೆದ ಕೆಲವು ತಿಂಗಳುಗಳಲ್ಲಿ ದೇಶದ ವಿವಿಧೆಡೆ ರೈಲು ಬೆಂಕಿ ಅವಘಡಗಳು ಸಂಭವಿಸುತ್ತಿರುವುದು ಆತಂಕ ಮೂಡಿಸಿದೆ. ರೈಲ್ವೆ ಇಲಾಖೆಯು ಸುರಕ್ಷಾ ಕ್ರಮಗಳನ್ನು ಬಲಪಡಿಸಬೇಕು ಎಂಬ ಒತ್ತಾಯ ಕೇಳಿಬಂದಿದೆ. ಪ್ರಯಾಣಿಕರು ರೈಲಿನಲ್ಲಿ ಪ್ರಯಾಣಿಸುವಾಗ ಎಚ್ಚರಿಕೆ ವಹಿಸಿ, ಅನುಮಾನಾಸ್ಪದ ವಸ್ತುಗಳನ್ನು ಗಮನಿಸಿದರೆ ತಕ್ಷಣ ಸಿಬ್ಬಂದಿಗೆ ಮಾಹಿತಿ ನೀಡಬೇಕು. ಈ ದುರಂತದಲ್ಲಿ ಮೃತರ ಕುಟುಂಬಕ್ಕೆ ಸಂತಾಪ ಸೂಚಿಸುತ್ತೇವೆ. ತನಿಖೆಯಿಂದ ಬೆಂಕಿಯ ನಿಜವಾದ ಕಾರಣ ಬಯಲಾಗಲಿ ಎಂದು ಆಶಿಸೋಣ.

# ಯುವತಿಯ ಖಾಸಗಿ ಅಂಗ ಮುಟ್ಟಿ ಕಿರುಕುಳ ಡೆಲಿವರಿ ಬಾಯ್ ಅರೆಸ್ಟ್

**ಬೆಂಗಳೂರು**: ಮಾಲ್‌ನಲ್ಲಿ ಕ್ರಿಸ್ಮಸ್ ಆಚರಿಸುತ್ತಿದ್ದಾಗ ಯುವತಿಯ ಖಾಸಗಿ ಅಂಗ ಮುಟ್ಟಿ ಲೈಂಗಿಕ ಕಿರುಕುಳ ನೀಡಿದ್ದ ಡೆಲಿವರಿ ಬಾಯ್‌ನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಗುವಾಹಟಿ ಮೂಲದ ಮನೂಜ್ ಚಾಂದ್(27) ಬಂಧಿತ ಆರೋಪಿ. ಡೆಲಿವರಿ ಬಾಯ್ ಆಗಿ ಕೆಲಸ ಮಾಡ್ತಿದ್ದ ಎಂದು ತಿಳಿದುಬಂದಿದೆ. ಡಿ.25ರಂದು ರಾತ್ರಿ 9:30ರ ಸುಮಾರಿಗೆ ಮಾಲ್‌ನಲ್ಲಿ ಕ್ರಿಸ್‌ಮಸ್ ಆಚರಣೆ ವೇಳೆ ಈ ಘಟನೆ ನಡೆದಿದೆ.



ಉದ್ದೇಶಪೂರ್ವಕವಾಗಿ ಯುವತಿಯ ಬಳಿ ಹೋಗಿ, ಖಾಸಗಿ ಅಂಗ ಸ್ಪರ್ಶಿಸಿ ಅಸಭ್ಯವಾಗಿ ವರ್ತಿಸಿ ಪರಾರಿಯಾಗಿದ್ದ. ಯುವತಿ ನೀಡಿದ ದೂರಿನ ಆಧಾರದ ಮೇಲೆ ಮಹಾದೇವಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪರಿಶೀಲನೆ ನಡೆಸಿದ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.

# ಎಮ್ಮೆಗೆ ನಾಯಿ ಕಚ್ಚಿದ ಪ್ರಕರಣ: ಹಾಲು ಬಳಸಿ ರಾಯ್ತಾ, 200 ಜನರಿಗೆ ಲಸಿಕೆ

ಲಕ್ನೋ: ನಾಯಿ ಕಚ್ಚಿದ್ದ ಎಮ್ಮೆಯ ಹಾಲು ಬಳಸಿ ತಯಾರಿಸಿದ್ದ ರಾಯ್ತಾ ಸೇವಿಸಿದ್ದ ಜನರಲ್ಲಿ ರೇಬೀಸ್ ಆತಂಕ ಮೂಡಿದೆ. ಹೀಗಾಗಿ ಮುನ್ನೆಚ್ಚರಿಕೆ ದೃಷ್ಟಿಯಿಂದ 200 ಜನರಿಗೆ ರೇಬೀಸ್ ಲಸಿಕೆ ನೀಡಲಾಗಿದೆ. ಉತ್ತರ ಪ್ರದೇಶದ ಬುಡೌನ್ ಜಿಲ್ಲೆಯ ಪಿಪ್ರೌಲಿ ಗ್ರಾಮದ ಜನರಲ್ಲಿ ರೇಬೀಸ್ ಆತಂಕ ಮೂಡಿದೆ. ಇಲ್ಲಿನ ನಿವಾಸಿಗಳು ಡಿ.23ರಂದು ನಡೆದಿದ್ದ ಅಂತ್ಯಕ್ರಿಯೆಯೊಂದಕ್ಕೆ ತೆರಳಿದಾಗ ಅಲ್ಲಿ ರಾಯ್ತಾವನ್ನು ಸೇವಿಸಿದ್ದರು.

ಅದಾದ ಬಳಿಕ ಡಿ.26ರಂದು ಎಮ್ಮೆ ರೇಬೀಸ್ ರೋಗದಿಂದ ಸಾವನ್ನಪ್ಪಿತ್ತು. ಅದೇ ಸತ್ತ ಎಮ್ಮೆ ಹಾಲಿನಿಂದಲೇ ರಾಯ್ತಾವನ್ನು ತಯಾರಿಸಲಾಗಿತ್ತು ಎಂದು ತಿಳಿದ ಕೂಡಲೇ 200 ಜನರು ಮುನ್ನೆಚ್ಚರಿಕೆಯಾಗಿ ಉಜಾನಿ ಸಮುದಾಯ ಆರೋಗ್ಯ ಕೇಂದ್ರದಕಲ್ಲಿ ರೇಬೀಸ್ ಲಸಿಕೆ ಪಡೆದುಕೊಂಡಿದ್ದಾರೆ. ಇದರಿಂದಾಗಿ ಸದ್ಯ ಗ್ರಾಮದಲ್ಲಿ ರೇಬೀಸ್ ಕಾಯಿಲೆ ಬಗ್ಗೆ ಆತಂಕ ಮನೆಮಾಡಿದೆ. ಈ ಕುರಿತು ಉಜಾನಿ ಸಮುದಾಯ ಆರೋಗ್ಯ ಕೇಂದ್ರದ ಮುಖ್ಯ ವೈದ್ಯಾಧಿಕಾರಿ ಡಾ.ರಾಮೇಶ್ವರ ಮಿಶ್ರಾ ಮಾತನಾಡಿ, ಎಮ್ಮೆಗೆ ನಾಯಿ ಕಚ್ಚಿದೆ ಹಾಗೂ ಸಾಯುವ ಮೊದಲು ಎಮ್ಮೆಯಲ್ಲಿ ರೇಬೀಸ್ ಲಕ್ಷಣ ಕಾಣಿಸಿದ್ದವು. ಚಿಕಿತ್ಸೆಗಿಂತ ನಿಯಂತ್ರಿಸುವುದು ಉತ್ತಮ. ಅನುಮಾನ ಇದ್ದ ಎಲ್ಲರಿಗೂ ರೇಬೀಸ್ ಲಸಿಕೆ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಸಾಮಾನ್ಯವಾಗಿ, ಹಾಲನ್ನು ಕುದಿಸಿದ ನಂತರ ರೇಬೀಸ್ ಬರುವ ಅಪಾಯವಿರುವುದಿಲ್ಲ, ಆದರೆ ಯಾವುದೇ ಅಪಾಯವನ್ನು ತಡೆಗಟ್ಟಲು ಲಸಿಕೆ ಹಾಕಲಾಗುತ್ತಿದೆ. ಗ್ರಾಮದಲ್ಲಿ ಇಲ್ಲಿಯವರೆಗೆ ಯಾವುದೇ ರೋಗ ಹರಡಿಲ್ಲ ಮತ್ತು ಪರಿಸ್ಥಿತಿ ಸಂಪೂರ್ಣವಾಗಿ ಸಾಮಾನ್ಯವಾಗಿದೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.